# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 311 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 04–07–2024 ಗುರುವಾರ | ಪುಟ: 4 | ಬೆಲೆ : ರೂ.2–00

Volume - 01 Issue - 311 | Title- Code: KARKAN 28269 | Chitradurga | Date: 04-07-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪತ್ರದ ಜತೆಗೆ ಸ್ಪರ್ಧಾತ್ಮಕ ಪರೀಕ್ಷೆಗೂ ತಯಾರಾಗಿ: ಎಸ್.ಕೆ.ವೆಂಟಗೋಡಿ 2

ಆರ್‌ಓ ಘಟಕ ಸರಿಪಡಿಸಿ, ಶುದ್ಧ ನೀರು ಪೂರೈಸಿ: ಜಿಲ್ಲಾಧಿಕಾರಿ ಸೂಚನೆ 3

ಬಿಎಂ ಸರ್ಕಾರಿ ಪ್ರೌಢಶಾಲೆ ಮೈದಾನದಲ್ಲಿ ಜನಸ್ಪಂದನಾ: ರಘುಮೂರ್ತಿ ಚಾಲನೆ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ–ಜಿಲ್ಲಾಧಿಕಾರಿ ಟಿ.ವೆಂಕಟೇಶ್

## ಸಂಚಾರ ಸಮಸ್ಯೆ ಪರಿಹಾರಕ್ಕೆ ವರದಿ:

# ಸಮಗ್ರ ಚರ್ಚೆ ನಂತರ ಅನುಷ್ಠಾನ

» ಚಿತ್ರದುರ್ಗ

ನಗರದ ಸಂಚಾರ ದಟ್ಟಣೆ ಹಾಗೂ ಸಮಸ್ಯೆ ಕುರಿತು ಸಂಚಾರ ಠಾಣೆ ಪೊಲೀಸರು ಸಮೀಕ್ಷೆ ನಡೆಸಿ, ಪರಿಹಾರಕ್ಕಾಗಿ ಸೂಕ್ತ ವರದಿ ಸಿದ್ಧಪಡಿಸಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಸಮಗ್ರ ಚರ್ಚೆ ನಡೆಸಿ, ಸಾಧಕ ಬಾಧಕಗಳನ್ನು ಅವಲೋಕಿಸಿ ಅನುಷ್ಠಾನ ಮಾಡುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರದ ಮುಖ್ಯ ರಸ್ತೆಯಲ್ಲಿ ಖಾಸಗಿ ಹಾಗೂ ಸರ್ಕಾರಿ ಬಸ್‍ಗಳ ಓಡಾಟದಿಂದ ಎಸ್.ಬಿ.ಐ ಬ್ಯಾಂಕ್ ಹಾಗೂ ಎಂ.ಜಿ ವೃತ್ತದಲ್ಲಿ ಸಂಚಾರ ದಟ್ಟಣೆ ಉಂಟಾಗುತ್ತಿದೆ. ಸುಗಮ ಸಂಚಾರಕ್ಕೆ ಅನುಕೂಲವಾಗುಂತೆ ನಗರ ಪ್ರವೇಶಿಸುವ ಹಾಗೂ ಹೊರ ಹೋಗುವ ಖಾಸಗಿ ಹಾಗೂ ಸರ್ಕಾರಿ ಬಸ್‍ಗಳ ಸಂಚಾರ ಮಾರ್ಗಗಳಲ್ಲಿ ಮಾಡಬೇಕಾದ ಬದಲಾವಣೆ, ದ್ವಿಚಕ್ರ ಹಾಗೂ ನಾಲ್ಕು ಚಕ್ರಗಳ ವಾಹನಗಳಿಗೆ ಸೂಕ್ತ ಪಾರ್ಕಿಂಗ್ ಸ್ಥಳ ಗುರುತಿಸಿ ವರದಿ ಸಲ್ಲಿಸಿದ್ದಾರೆ. ಈ ಕುರಿತು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಚಳ್ಳಕೆರೆ ಗೇಟ್‍ನಲ್ಲಿ ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಹೊಸ ಸಂಚಾರಿ ವೃತ್ತ ನಿರ್ಮಾಣ ಮಾಡುವ ಕುರಿತು ಲೋಕೋಪಯೋಗಿ ಹಾಗೂ ನಗರಸಭೆಯಿಂದ ಪರಿಶೀಲನೆ ನಡೆಸಬೇಕು. ರಸ್ತೆ ಸೇತುವೆ ಕೆಳಭಾಗದ ಹಾಗೂ ಇಕ್ಕೆಲಗಳಲ್ಲಿ ಅನಧಿಕೃತವಾಗಿ ನಡೆಸುತ್ತಿರುವ ಗೂಡಂಗಡಿಗಳನ್ನು ತೆರವುಗೊಳಿಸಬೇಕು. ಸೇತುವೆ ಕೆಳಭಾಗದಲ್ಲಿ ಪಾರ್ಕಿಂಗ್‍ಗೆ ಅವಕಾಶ ನೀಡದಂತೆ, ರಸ್ತೆಯ ಇಕ್ಕೆಲಗಳಲ್ಲಿರುವ ಖಾಲಿ ಸ್ಥಳದಲ್ಲಿ ದ್ವಿ ಚಕ್ರ ವಾಹನ ಪಾರ್ಕಿಂಗ್ ವ್ಯವಸ್ಥೆ ಮಾಡಬೇಕು. ಹಾಗೂ ಚಳ್ಳಕೆರೆ ಗೇಟ್ ಬಳಿ ಬಸ್ ತಂಗುದಾಣ ನಿರ್ಮಿಸುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಕೆಳಗೋಟೆಯ ಬಸವೇಶ್ವರ ಆಸ್ಪತ್ರೆಯ ಬಳಿಯ ಹಳೆಯ ರಾಷ್ಟ್ರೀಯ ಹೆದ್ದಾರಿ ಅಪಾಯಕರ ಸ್ಥಳವಾಗಿದೆ. ಜನರು ರಸ್ತೆ ದಾಟಲು ಹೋಗಿ ಅಪಘಾತದಲ್ಲಿ ಮರಣ ಹೊಂದುತ್ತಿದ್ದಾರೆ. ಈ ಸ್ಥಳದಲ್ಲಿ 2020 ರಿಂದ 2024ರ ವರೆಗೆ ವಿವಿಧ ಅಪಘಾತದಲ್ಲಿ ಒಟ್ಟು 11 ಜನರು ಮೃತಪಟ್ಟಿದ್ದು, ಲೋಕೋಪಯೋಗಿ ಇಲಾಖೆ ವತಿಯಿಂದ ಜನರು ಹೆದ್ದಾರಿ ಪ್ರವೇಶಿಸದಂತೆ ಲೋಹದ ಮೆಸ್ ಅಳವಡಿಸಬೇಕು. ಹೀಗೆ ಅಳವಡಿಸಿದ ಮೆಸ್ ತುಂಡಾಗದಂತೆ ನಿರ್ವಹಣೆ ಮಾಡಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಸಭೆಯಲ್ಲಿ ಹೇಳಿದರು.

ಈಗಾಗಲೇ ರಸ್ತೆಯನ್ನು ಹೆದ್ದಾರಿ ಪ್ರಾಧಿಕಾರ ಲೋಕೋಪಯೋಗಿ ಇಲಾಖೆಗೆ ಹಸ್ತಾಂತರಿಸಿದೆ. ತಕ್ಷಣವೇ ಹೆದ್ದಾರಿ ಮಧ್ಯದ ಡಿವೈಡರ್‌ಗಳಲ್ಲಿ ಬೆಳೆದಿರುವ ಗಿಡಗಳನ್ನು ಕಡಿಯುವ ಕೆಲಸವಾಗಬೇಕು. ಸಂಚಾರಿ ಫಲಕಗಳು ಅಳವಡಿಸಬೇಕು. ಅಪಘಾತ ಕೇವಲ ಒಬ್ಬ ವ್ಯಕ್ತಿ ಸಂಬಂಧ ಪಟ್ಟದ್ದು ಅಲ್ಲ. ಅವರನ್ನು ನಂಬಿದ ಕುಟುಂಬಗಳು ಅಪಘಾತದಲ್ಲಿ ಬೀದಿಪಾಲಾಗುತ್ತಿವೆ. ಆದ್ದರಿಂದ ರಸ್ತೆ ಸುರಕ್ಷತೆಗೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವಂತೆ ಹೇಳಿದರು.

ತುರುವನೂರು ರಸ್ತೆಯಿಂದ ಜಿಲ್ಲಾ ಆಸ್ಪತ್ರೆಗೆ ತೆರಳುವ ಮಾರ್ಗದಲ್ಲಿ ಜಿಲ್ಲಾ ಆಸ್ಪತ್ರೆ ಮುಂಭಾಗ ಬಿ.ಡಿ. ರಸ್ತೆಯಲ್ಲಿನ ಡಿವೈಡರ್ ತೆರವುಗೊಳಿಸಿ ಆಸ್ಪತ್ರೆಗೆ ಹೋಗಲು ಅನುಕೂಲ ಮಾಡಿಕೊಡಬೇಕು. ಮೆದೆಹಳ್ಳಿ ಅಂಡರ್ ಪಾಸ್ ಬಳಿ ರಸ್ತೆಯ ಮಧ್ಯದಲ್ಲಿ ಒಳಚರಂಡಿ ದುರಸ್ಥಿಯಲ್ಲಿ ಇದ್ದು, ಸುಗಮ ಸಂಚಾರಕ್ಕೆ ಅಡ್ಡಿಯಾಗಿದೆ. ಇದೇ ಮಾದರಿಯಲ್ಲಿ ತುರುವನೂರು ರಸ್ತೆಯ ಅಂಡರ್ ಪಾಸ್ ತೊಂದರೆ ಇದೆ. ನಗರ ರಸ್ತೆಗಳಲ್ಲಿ ಬಿಡಾಡಿ ದನಗಳ ಸಂಚಾರ ಅಧಿಕವಾಗಿದೆ. ಗೂಡಂಗಡಿಗಳು ಸಹ ಹೆಚ್ಚಾಗಿವೆ ಇದರಿಂದ ಲಘು ಅಪಘಾತಗಳು ಉಂಟಾಗುವ ಸಂಭವವಿದೆ ಎಂದು ಸಂಚಾರಿ ಪೊಲೀಸ್ ಸಬ್ ಇ□□□□ಪೆಕ್ಟರ್ ಟಿ. ರಾಜು ಸಭೆಯಲ್ಲಿ ವಿವರಿಸಿದರು.

ನಗರದ ಪಾರ್ಕಿಂಗ್ ಸ್ಥಳಗಳಲ್ಲಿ ಮಾರ್ಕಿಂಗ್ ಮಾಡಲು ರೂ.14.63 ಲಕ್ಷಗಳ ಅಂದಾಜು ಪಟ್ಟಿ ತಯಾರಿಸಲಾಗಿದೆ. ಶೀಘ್ರವೇ ಟೆಂಡರ್ ಕರೆಯಲಾಗುವುದು ಎಂದು ನಗರ ಸಭೆ ಆಯುಕ್ತೆ ಎಂ.ರೇಣುಕಾ ಸಭೆಯಲ್ಲಿ ಮಾಹಿತಿ ನೀಡಿದರು.

ಆಟೋ ನಿಲ್ದಾಣಗಳಿಗಾಗಿ ನಗರಸಭೆಯಿಂದ 27 ಸ್ಥಳಗಳನ್ನು ಗುರುತಿಸಲಾಗಿದೆ. ಪೊಲೀಸ್ ಇಲಾಖೆ ವತಿಯಿಂದ ಚರ್ಚಿಸಿ ಕ್ರಮ ವಹಿಸಲಾಗುವುದು. ಬೀದಿ ಬದಿ ವ್ಯಾಪಾರಿಗಳಿಗಾಗಿ 12 ಸ್ಥಳಗಳನ್ನು ಗುರುತಿಸಲಾಗಿದೆ. ಇನ್ನೂ ಕೆಲವು ಭಾಗಗಳಲ್ಲಿ ವ್ಯಾಪಾರ ಸ್ಥಳಗಳನ್ನು ಗುರುತಿಸಲಾಗುವುದು ಎಂದರು.

ಕಡ್ಲೆಗುದ್ದು ಹಾಗೂ ಸಾಸಲು ರಸ್ತೆಗಳಲ್ಲಿ ಅದಿರು ತುಂಬಿರುವ ಬೃಹತ್ ವಾಹನಗಳು ಸಂಚಾರ ಮಾಡುತ್ತಿವೆ. ಈ ವಾಹನಗಳಿಂದ ರಸ್ತೆ ಹಾಳಾಗುವುದರ ಜೊತೆ ಪರಿಸರ ಮಾಲಿನ್ಯವುಉಂಟಾಗುತ್ತಿದೆ.ಈವಾಹನಗಳ ಪೈಕಿ 20 ವರ್ಷ ಪೂರೈಸಿದ ವಾಹನಗಳ ನೊಂದಣಿಯನ್ನು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ರದ್ದು ಪಡಿಸಬೇಕು.

ಗ್ರಾಮೀಣ ಭಾಗದಲ್ಲಿ ಹಳೆಯ ಗೂಡ್ಸ್ ವಾಹನ,ಟ್ಯಾಕ್ಟರ್,ಟ್ರ್ಯಾಲಿ,ಲಾರಿ,ಟಿಪ್ಪರ್‌ಗಳ ಹಿಂಬದಿಯಲ್ಲಿ ರಿಫ್ಲೆಕ್ಟರ್‌ಗಳು ಇಲ್ಲದೇ ಇರುವುದು ಕಂಡುಬರುತ್ತದೆ. ಇದರಿಂದ ಸಾಕಷ್ಟು ಅಫಘಾತ ಹಾಗೂ ಸಾವು ನೋವು ಸಂಭವಿಸುತ್ತಿವೆ. ಸಾರಿಗೆ ಇಲಾಖೆ ಅಧಿಕಾರಿಗಳು ರಿಫ್ಲೆಕ್ಟರ್‌ಗಳ ಅಳವಡಿಕೆಗೆ ವಿಶೇಷಅಭಿಯಾನ ನಡೆಸಬೇಕು. ತಪಾಸಣೆ ನಡೆಸಿ ವಾಹನ ಮಾಲಿಕರಿಂದ ಹಣ ಪಡೆದು ರಿಫ್ಲೆಕ್ಟರ್‌ಗಳನ್ನು ಅಳವಡಿಸಬೇಕು. ಗ್ರಾಮೀಣ ಭಾಗದಲ್ಲಿ ಸರಕು ಸಾಗಣೆ ವಾಹನಗಳಲ್ಲಿ ಪ್ರಯಾಣಿಕರನ್ನು ಕರೆದೊಯ್ಯುವುದು ಕಂಡುಬರುತ್ತಿದೆ ಇದಕ್ಕೆ ಕಡಿವಾಣ ಹಾಕುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಒಟ್ಟು 33,000 ಎಲ್.ಎಂ.ವಿಗಳು ನೊಂದಣಿಯಾಗಿವೆ. ಇದರಲ್ಲಿ ಬಹುತೇಕ ಟ್ಯಾಕ್ಟರ್ ಹಾಗೂ ಗೂಡ್ಸ್ ವಾಹನಗಳು ಆಗಿವೆ. ಸಾರಿಗೆ ಇಲಾಖೆಯಿಂದ ರಿಫ್ಲಕ್ಟರ್ ಅಡಳವಡಿಸಲು ಕ್ರಮ ಕೈಗೊಳ್ಳಲಾಗುವುದು. ಜಿಲ್ಲೆಯಲ್ಲಿ 247 ಅದಿರು ಸಾಗಣೆ ಮಾಡುವ ಲಾರಿಗಳು ಇವೆ. ಇವುಗಳಲ್ಲಿ ನೊಂದಣಿ ಅವಧಿ ಮುಕ್ತಾಯಗೊಂಡ ಹಾಗೂ ಸಕ್ಷಮವಾಗಿ ಇರುವ ಲಾರಿಗಳ ನೊಂದಣಿ ನವೀಕರಿಸದೇ, ರದ್ದು ಮಾಡುವುದಾಗಿ ಪ್ರಾದೇಶಿಕ ಸಾರಿಗೆ ಭರತ್.ಎಂ.ಕಾಳೆಸಿಂಗೆ ಹೇಳಿದರು.


ಪುಟ ↘ 2




### ಟ್ರಕ್ ಟರ್ಮಿನಲ್ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಿ

ಹಿರಿಯೂರು ನಗರದಲ್ಲಿ ಎರಡು ರಾಷ್ಟ್ರೀಯ ಹೆದ್ದಾರಿಗಳು ಇರುವುದರಿಂದ, ಹೆದ್ದಾರಿ ಪಕ್ಕದಲ್ಲಿಯೇ ವಾಹನಗಳನ್ನು ನಿಲ್ಲಿಸುತ್ತಿರುವುದು ಕಂಡುಬಂದಿದ್ದು, ಇದರಿಂದಲೂ ಅಪಘಾತಗಳು ಸಂಭವಿಸುತ್ತಿವೆ. ಹೀಗಾಗಿ ಇಲ್ಲಿನ ರಸ್ತೆ ಬದಿಯಲ್ಲಿ ಲಾರಿಗಳನ್ನು ನಿಲ್ಲಿಸದಂತೆ ಮಾಡಲು ಹಿರಿಯೂರು ಬಳಿ 20 ಎಕರೆ ವಿಸ್ತೀರ್ಣದಲ್ಲಿ ಟ್ರಕ್ ಟರ್ಮಿನಲ್ ನಿರ್ಮಿಸಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸೂಚನೆ ನೀಡಿದ ಜಿಲ್ಲಾಧಿಕಾರಿಗಳು, ಹಿರಿಯೂರು ಹೆದ್ದಾರಿಯ ಇಕ್ಕೆಲಗಳಲ್ಲಿ ಅನಧಿಕೃತವಾಗಿ ನಡೆಸಲಾಗುತ್ತಿರುವ ಎಲ್ಲಾ ಗೂಡಂಗಡಿ, ಹೋಟೆಲ್ ಹಾಗೂ ಡಾಬಾಗಳನ್ನು ತೆರವುಗೊಳಿಸುವಂತೆ ಸೂಚನೆ ನೀಡಿದರು.

### ಶಿಶು ಕವಚ, ವಿಎಲ್‌ಟಿ ಪ್ಯಾನಿಕ್ ಬಟನ್ ಕಡ್ಡಾಯ

ಸಾರಿಗೆ ಇಲಾಖೆಯಿಂದ ಮಕ್ಕಳ ಹಿತದೃಷ್ಟಿಯಿಂದ ಬೈಕ್ ಸವಾರಿಯ ವೇಳೆ 9 ತಿಂಗಳ ಮೇಲ್ಪಟ್ಟ ಹಾಗೂ 4 ವರ್ಷದ ಮಕ್ಕಳಿಗೆ ಶಿಶು ಕವಚ ಕಡ್ಡಾಯಗೊಳಿಸಿದೆ. ಇಲ್ಲವಾದರೆ ರೂ.1000 ದಂಡ ವಿಧಿಸಲಾಗುವುದು. ಇದರ ಜೊತೆಗೆ 4 ಆಸನಗಳ ಮೇಲ್ಪಟ್ಟ ವಾಹನಗಳಲ್ಲಿ ವಿಎಲ್‍ಟಿ (ವೆಹಿಕಲ್ ಲೊಕೇಷನ್ ಟ್ರಾಕಿಂಗ್ ) ಮಹಿಳೆ ಹಾಗೂ ಮಕ್ಕಳ ಹಿತದೃಷ್ಟಿಯಿಂದ ಪ್ಯಾನಿಕ್ ಬಟನ್ ಅಳವಡಿಸುವುದು ಕಡ್ಡಾಯ ಮಾಡಲಾಗಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್.ಎಂ.ಕಾಳೆಸಿಂಗೆ ಸಭೆಯಲ್ಲಿ ಮಾಹಿತಿ ನೀಡಿದರು.

**ಪ್ರಮುಖ ಸುದ್ದಿ**

## ಕಂಪ್ಯೂಟರ್ ಕೇಂದ್ರಗಳ ಮುಂದೆ ಸರ್ಕಾರಕ್ಕೆ ಶಾಪಹಾಕಿದ ಜನರು

# ಹೊಸ ರೇಷನ್ ಕಾರ್ಡ್ ಅರ್ಜಿ ಸಲ್ಲಿಕೆಗೆ ಸರ್ವರ್ ಅಡ್ಡಿ

» ಚಳ್ಳಕೆರೆ

ರಾಜ್ಯ ಸರ್ಕಾರ ನೂತನವಾಗಿ ಪಡಿತರ ಚೀಟಿ ಹಾಗೂ ಹೆಸರು ಸೇರ್ಪಡೆಗೆ ಎರಡು ದಿನಗಳ ಕಾಲ ಅವಕಾಶ ನೀಡಿದ್ದು, ನಗರದ ಬಹುತೇಕ ಎಲ್ಲಾ ಕೇಂದ್ರಗಳ ಮುಂದೆ ಜನರು ಸಾಲಿನಲ್ಲಿ ನಿಂತು ದಾಖಲಿಗಳನ್ನು ಸಿದ್ದವಾದರೂ ಸಹ ಸರ್ವರ್ ಸಮಸ್ಯೆಯಿಂದ ಎರಡೂ ದಿನಗಳಿಂದ ಯಾವುದೇ ಹೊಸಕಾರ್ಡ್ ನೊಂದಾವಣೆ, ಸೇರ್ಪಡೆಯಾಗದೆ ಜನರು ಪರದಾಡಿದರು.

ಕೇವಲ ಚಳ್ಳಕೆರೆ ನಗರವಷ್ಟೇಯಲ್ಲದೆ, ಗ್ರಾಮಾಂತರ ಪ್ರದೇಶದಿಂದಲೂ ಮಹಿಳೆಯರು ಪುಟ್ಟಮಕ್ಕಳೊಂದಿಗೆ ಕಂಪ್ಯೂಟರ್ ಕೇಂದ್ರಗಳ ಮುಂದೆ ಮಳೆ, ಗಾಳಿಯನ್ನು ಲೆಕ್ಕಿಸದೆ ಬೆಳಗಿನಿಂದ ಸಂಜೆವರೆಗೂ ಕಾದರೂ ಸರ್ವರ್ ಸಮಸ್ಯೆ ಬಗೆಹರಿಯಲಿಲ್ಲ, ಇಡೀ ದಿನ ಮಕ್ಕಳುಮರಿಯೊಂದಿಗೆ ಕಾದ ಮಹಿಳೆಯರು ಸರ್ಕಾರ ನಿರ್ಧಾರಕ್ಕೆ ಅಸಮದಾನ ವ್ಯಕ್ತಪಡಿಸಿ ಇಡೀ ಶಾಪಹಾಕಿದರು.

ಈ ಬಗ್ಗೆ ನೊಂದ ಮಹಿಳೆ ಪುಟ್ಟಮ್ಮ ಮಾತನಾಡಿ, ರಾಜ್ಯ ಸರ್ಕಾರಕ್ಕೆ ನಿಜವಾದ ಜನಪರ ಕಾಳಜಿ ಇದ್ದರೆ ನೊಂದಾವಣೆ ಮತ್ತು ಮಾರ್ಪಡಿಗೆ ಸಮಯವಕಾಶ ನೀಡಬೇಕು. ಕೇವಲ ಎರಡು ದಿನ ಕೊಟ್ಟರೆ ಜನರನ್ನು ಇಕ್ಕಟ್ಟಿಗೆ ಸಿಲುಕಿಸಿದಂತಾಗುತ್ತದೆ. ಮನೆ ಕೆಲಸವನ್ನುಬಿಟ್ಟು ಗ್ರಾಮ, ಕರ್ನಾಟಕ ಒನ್‌ಗಳ ಮುಂದೆ ಕಾಯುವ ದುಸ್ಥಿತಿ ಉಂಟಾಗಿದೆ. ಈ ಹಿಂದೆ ಯಾವುದೇ ಸಮಯದಲ್ಲಾದರೂ ರೇಷನ್ ಕಾರ್ಡ್‌ಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಿದ್ದರು.

ಗೃಹಲಕ್ಷ್ಮಿ ಯೋಜನೆ ಜಾರಿಗೆ ತಂದಾಗಿನಿಂದ ಸರ್ಕಾರದ ಪ್ರತಿತಿಂಗಳ ಗೃಹಲಕ್ಷ ಯೋಜನೆ ಹಣ ಪಡೆಯಲು ರೇಷನ್ ಕಾರ್ಡ್‌ಗೆ ಹೊಸ ಅರ್ಜಿ ಸಲ್ಲಿಸಲು ಮುಂದಾಗಿದ್ದಾರೆಂದು ಸರ್ವರ್ ಸಮಸ್ಯೆ ಉಂಟು ಮಾಡುತ್ತಿದ್ದಾರೆ ಎಂದು ಆರೋಪಿಸಿದಳು. ಆದರೆ, ನಮಗೆ ಸರ್ಕಾರದ ಗೃಹಲಕ್ಷ ಹಣಕ್ಕಿಂತ ಪ್ರತಿನಿತ್ಯ ಊಟ ಮಾಡಲು ಅಕ್ಕಿ, ರಾಗಿ ಸಿಕ್ಕರೆ ಸಾಕು ಎಂದು ತಮ್ಮ ಅಳಲು ತೋಡಿಕೊಂಡರು.ಸರ್ಕಾರದ ದಿಢೀರ್ ನಿರ್ಧಾರಕ್ಕೆ ಸಾರ್ವಜನಿಕವಾಗಿ ವ್ಯಾಪಕ ಅಸಮದಾನ ವ್ಯಕ್ತವಾಗಿದೆ. ಎಲ್ಲಾ ಕೇಂದ್ರಗಳ ಮುಂದೆ ಸರ್ವರ್ ಸಮಸ್ಯೆ ಇದ್ದರೂ ಯಾವುದೇ ಅಧಿಕಾರಿ ಈ ಬಗ್ಗೆ ಕೇಂದ್ರಗಳಿಗೆ ಭೇಟಿ ನೀಡಿ ವಿಚಾರಿಸದೆ ದೂರ ಉಳಿಯುವ ಮೂಲಕ ಜನರ ಆಕ್ರೋಶಕ್ಕೆಗುರಿಯಾಗಿದ್ದಾರೆ. ಕಂಪ್ಯೂಟರ್ ಕೇಂದ್ರಗಳ ನಿರ್ವಾಹಕರು ಮಾತ್ರ ಸರ್ವರ್ ಸರಿ ಇದ್ದರೆ ಕೆಲಸ ಆಗುತ್ತದೆ. ಇಲ್ಲವಾದರೆ ಯಾವುದೇ ಕೆಲಸ ಮಾಡಲು ಸಾಧ್ಯವಿಲ್ಲ. ಎರಡು ದಿನಗಳಿಂದ ಒಂದು ಅರ್ಜಿಯನ್ನು ಹಾಕಲು ಸಾಧ್ಯವಾಗಿಲ್ಲ ಜನರು ಮಾತ್ರ ಕೇಂದ್ರಗಳ ಮುಂದೆ ಸಾಲುಗಟ್ಟಿ ನಿಂತು ನಮಗೆ ಒತ್ತಾಯಿಸುತ್ತಿದ್ದಾರೆ. ಸರ್ವರ್ ಸಮಸ್ಯೆ ಬಗೆಹರಿದಲ್ಲಿ ಮಾತ್ರ ರೇಷನ್ ಕಾರ್ಡ್ ನೀಡಲು ಸಾಧ್ಯವಾಗುತ್ತದೆ ಎಂದಿದ್ದಾರೆ.




## ಫಾಸ್ಟ್ ನ್ಯೂಸ್

### ಚಾಮರಾಜನಗರ ನೂತನ ಎಸ್ಪಿ ಡಾ.ಕವಿತಾ

» ಚಿತ್ರದುರ್ಗ



ಸುಧಾರಣೆಗಾಗಿ, ಕಾನೂನು ಸುವ್ಯವಸ್ಥೆಯನ್ನು ಮತ್ತಷ್ಟು ಬಲಗೊಳಿಸುವ ಉದ್ದೇಶದಿಂದ ಪೊಲೀಸ್ ಇಲಾಖೆಯಲ್ಲಿ ರಾಜ್ಯ ಸರ್ಕಾರ ವರ್ಗಾವಣೆಯ ಸರ್ಜರಿ ಮಾಡಿದೆ. ರಾಜ್ಯದಲ್ಲಿ 25 ಐಪಿಎಸ್ ಆಫೀಸರ್ಗಳ ವರ್ಗಾವಣೆಯನ್ನು ಮಾಡಲಾಗಿದೆ. ವರ್ಗಾವಣೆಗೊಂಡ ಪೊಲೀಸ್ ಅಧಿಕಾರಿಗಳು ಒಂದುವಾರದಲ್ಲಿನೂತನ ಜವಾಬ್ದಾರಿಯನ್ನು ಹೊರಲಿದ್ದಾರೆ. ಈ ಹಿನ್ನಲೆಯಲ್ಲಿ ಮೈಸೂರಿನಲ್ಲಿ ಕೆಲಸ ಮಾಡುತ್ತಿದ್ದ ಚಿತ್ರದುರ್ಗ ತಾಲ್ಲೂಕು ಬೊಮ್ಮೆನಹಳ್ಳಿ ಮೂಲದ ಡಾ.ಕವಿತಾ ಬಿ.ಟಿ. ಇವರನ್ನು ಚಾಮರಾಜನಗರ ಜಿಲ್ಲೆಯ ರಕ್ಷಣಾಧಿಕಾರಿಗಳಾಗಿ ವರ್ಗಾವಣೆ ಮಾಡಲಾಗಿದೆ. ಚಾಮರಾಜ ನಗರಕ್ಕೆ ನೂತನ ರಕ್ಷಣಾಧಿಕಾರಿಗಳಾಗಿ ನೇಮಕವಾಗಿರುವ ಡಾ.ಬಿ.ಟಿ.ಕವಿತಾರವರಿಗೆ ಶ್ರೀ ಶಿವಶರಣ ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಮಾದಾರ ಚನ್ನಯ್ಯ ಶ್ರೀಗಳು, ಮಾಜಿ ಸಚಿವರಾದ ಹೆಚ್.ಆಂಜನೇಯ, ಮಾಜಿ ಸಂಸದರಾದ ಬಿ.ಎನ್.ಚಂದ್ರಪ್ಪ, ಆದಿ ಜಾಂಬವ ನಿಗಮದ ಅಧ್ಯಕ್ಷರಾದ ಜಿ.ಎಸ್.ಮಂಜುನಾಥ್ ಹಾಗೂ ಆದಿ ಜಾಂಬವ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಬಿ.ಟಿ.ಮಂಜುನಾಥ್ ಅಭಿನಂದಿಸಿ, ಶುಭ ಕೋರಿ ತಮ್ಮ ಆಧಿಕಾರವಧಿಯಲ್ಲಿ ಉತ್ತಮವಾದ ಕೆಲಸವನ್ನು ಮಾಡಲಿ ಕಾನೂನು ಸುವ್ಯವಸ್ಥೆಯನ್ನು ಸರಿಯಾದ ರೀತಿಯಲ್ಲಿ ಕಾಪಾಡಿ, ನೊಂದ ಜನರಿಗೆ ನ್ಯಾಯವನ್ನು ಒದಗಿಸಲಿ ಎಂದು ಹಾರೈಸಿದ್ದಾರೆ

### ಸುನೀತಾಗೆ ಡಾಕ್ಟರೇಟ್ ಪದವಿ

» ದಾವಣಗೆರೆ



ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಶ್ರೀಮತಿ ಸುನಿತಾ ಕೆ.ಬಿ ಇವರಿಗೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯ ಡಾಕ್ಟರೇಟ್ ಪದವಿ ನೀಡಿದೆ. ಕರ್ನಾಟಕ ವಿಶ್ವವಿದ್ಯಾನಿಲಯದ ವಾಣಿಜ್ಯಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾದ ಡಾ. (ಶ್ರೀಮತಿ) ಎ .ಎನ್. ತಾಮ್ರಗುಂಡಿ, ಇವರ ಮಾರ್ಗದರ್ಶನದಲ್ಲಿ ಮಂಡಿಸಿದ "Role of Lead Bank in Financial Inclusion - A Study of Davanagere District" ಎಂಬ ಮಹಾ ಪ್ರಬಂಧಕ್ಕೆ ಡಾಕ್ಟರೇಟ್ ಪದವಿ ನೀಡಲಾಗಿದೆ. ಶ್ರೀಮತಿ ಸುನಿತಾ ಕೆ.ಬಿ. ಇವರು ದಿ. ಶ್ರೀ ಕೆ. ಬಸಪ್ಪ ದಿ. ಶ್ರೀಮತಿ ಕೆ .ಬಿ .ರತ್ನಮ್ಮ ಇವರ ಪುತ್ರಿ ಹಾಗೂ ದಾವಣಗೆರೆ ವಾಸಿ ಶ್ರೀ ಕೆ.ಎಂ. ಜಯಪ್ಪ ರೈಲ್ವೆ ಇಲಾಖೆ ಇವರ ಪತ್ನಿ.

### ಜುಲೈ 11ರಂದು ಚಿತ್ರದುರ್ಗ ತಾ.ಪಂ ತ್ರೈಮಾಸಿಕ ಕೆ.ಡಿ.ಪಿ ಸಭೆ

» ಚಿತ್ರದುರ್ಗ

ಇದೇ ಜುಲೈ 12ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಿಗಧಿಯಾಗಿದ್ದ ಚಿತ್ರದುರ್ಗ ತಾಲ್ಲೂಕು ಪಂಚಾಯತ್ 2024–25ನೇ ಸಾಲಿನ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆಯು ಕಾರಣಾಂತರಗಳಿಂದ ಜುಲೈ 11ರಂದು ಬೆಳಿಗ್ಗೆ 11ಕ್ಕೆ ಆಯೋಜಿಸಲಾಗಿದೆ. ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಸಭೆಯ ಅಧ್ಯಕ್ಷತೆ ವಹಿಸುವರು ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಸಂಚಾರ ಸಮಸ್ಯೆ ಪರಿಹಾರಕ್ಕೆ ವರದಿ: ಸಮಗ್ರ ಚರ್ಚೆ ನಂತರ ಅನುಷ್ಠಾನ



» ಮೊದಲ ಪುಟದಿಂದ

ರಸ್ತೆ ಸುರಕ್ಷತಾ ಸಮಿತಿ ನೀಡಿದ ಸೂಚನೆಗಳನ್ನು ಅಧಿಕಾರಿಗಳು ತಪ್ಪದೆ ಪಾಲಿಸಬೇಕು. ಜಿಲ್ಲೆಯಲ್ಲಿ ಉಂಟಾಗುತ್ತಿರುವ ಅಪಘಾತಗಳ ಪ್ರಮಾಣ ಇಳಿಕೆಯಾಗಬೇಕು. ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ರಸ್ತೆಗಳ ಸುರಕ್ಷತಾ ಲೆಕ್ಕ ಪರಿಶೋಧನೆಯನ್ನು ಮಾಡಿಸಬೇಕು. ಜಿಲ್ಲೆಯಲ್ಲಿ ರಾಜ್ಯ ಹಾಗೂ ಜಿಲ್ಲಾ ರಸ್ತೆಗಳ ಸ್ಥಿತಿಗತಿ ಬಗ್ಗೆ ವರದಿ ನೀಡಬೇಕು. ರಸ್ತೆ ಸುರಕ್ಷತಾ ನಿಧಿಯಡಿಯಲ್ಲಿ ಅನುದಾನ ಒದಗಿಸುವಂತೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಿ. ರಸ್ತೆ ಸುರಕ್ಷತಾ ನಿಧಿಯಿಂದ ಜಿಲ್ಲೆಯಲ್ಲಿ ಈಗಾಗಲೇ ಗುರುತಿಸಲಾಗಿರುವ ಅಪಘಾತ ವಲಯಗಳಲ್ಲಿ ಸೂಚನಾ ಫಲಕ, ಮಾರ್ಕಿಂಗ್, ಬ್ಲಿಂಕರ್ಸ್ ಅಳವಡಿಕೆ ಸೇರಿದಂತೆ ಅಗತ್ಯ ರಸ್ತೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.ಸಭೆಯಲ್ಲಿ ಲೋಕೋಪಯೋಗಿ ಕಾರ್ಯಪಾಲಕ ಅಭಿಯಂತರ ಮಲ್ಲಿಕಾರ್ಜುನ್, ಹೆದ್ದಾರಿ ಪ್ರಾಧಿಕಾರ, ಗ್ರಾಮೀಣಾಭಿವೃದ್ಧಿ ಸೇರಿದಂತೆ ಇತರೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಕಾನೂನು ಪದವೀಧರರಿಗೆ 4 ವರ್ಷದ ತರಬೇತಿಗಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿಗೆ ಅಲ್ಪಸಂಖ್ಯಾತರ ವರ್ಗಗಳಿಗೆ ಸೇರಿದ ಕಾನೂನು ಪದವೀಧರರಿಗೆ ನ್ಯಾಯಾಂಗ ಆಡಳಿತದಲ್ಲಿ 4 ವರ್ಷದ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮತೀಯ ಅಲ್ಪಸಂಖ್ಯಾತರ ವರ್ಗಗಳಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಪಾರ್ಸಿ, ಸಿಖ್, ಆಂಗ್ಲೋಇಂಡಿಯನ್ ಗೆ ಸೇರಿದವರು ಅರ್ಜಿ ಸಲ್ಲಿಸಬಹುದು. ಜುಲೈ 20 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ತರಬೇತಿಯ ಅವಧಿ 4 ವರ್ಷಗಳಾಗಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಹೆಯಾನ ರೂ.5000 ತರಬೇತಿ ಭತ್ಯೆ ನೀಡಲಾಗುವುದು. ಜಿಲ್ಲೆಯಿಂದ 05 ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಮಾಡಲಾಗುತ್ತದೆ, ಹೆಚ್ಚಿನ ಮಾಹಿತಿಗೆ ದೂರವಾಣಿ 08192-250022 ಸಂಪರ್ಕಿಸಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ.

### ಮುನಿಸಿಪಾಲಿಟಿ ಹಂತ-4ರ ಯೋಜನೆಯಡಿ ಉಚಿತ ವೈಯಕ್ತಿಕ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ನಗರೋತ್ಥಾನ (ಮುನಿಸಿಪಾಲಿಟಿ) ಹಂತ-4 ಯೋಜನೆಯಡಿ ಶೇ 24.10, 7.25 ಮತ್ತು ಶೇ 5 ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ, ಅಲ್ಪಸಂಖ್ಯಾತ ವರ್ಗಗಳ ನಿರುದ್ಯೋಗಿ ಯುವತಿಯರಿಗೆ ಉಚಿತ ಹೊಲಿಗೆ ಯಂತ್ರ, ಮನೆ ಮೇಲ್ಛಾವಣಿ ದುರಸ್ಥಿಗೆ ಸಮಾಗ್ರಿಗಳ ಖರೀದಿಗೆ ಧನಸಹಾಯ, ಇತರೆ ಬಡ ವರ್ಗದ ಉದ್ದಿಮೆದಾರರಿಗೆ ಸಹಾಯಧನ ಮತ್ತು ದೈಹಿಕ ವಿಕಲಚೇತನರಿಗೆ ತ್ರಿಚಕ್ರ ವಾಹನ, ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಗಳನ್ನು ನೀಡಲು ಅರ್ಹ ಫಲಾನುಭವಿಗಳಿಂದ ವೈಯಕ್ತಿಕ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಹರು ಸೌಲಭ್ಯ ಪಡೆಯಲು ಪಾಸ್‌ಪೋರ್ಟ್ 2 ಭಾವಚಿತ್ರ, ಆಧಾರ್ ಕಾರ್ಡ್ ಜೆರಾಕ್ಸ್, ಚುನಾವಣಾ ಗುರುತಿನ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿ , ಮನೆಯ ಇ-ಖಾತೆ ಜೆರಾಕ್ಸ್ ಪ್ರತಿ, ನಿವಾಸಿ ದೃಢೀಕರಣ, ವ್ಯಾಸಂಗ ಪ್ರಮಾಣ ಪತ್ರದೊಂದಿಗೆ ಜುಲೈ.15 ರೊಳಗಾಗಿ ಜಗಳೂರು ಪಟ್ಟಣ ಪಂಚಾಯಿತಿ ಕಾರ್ಯಾಲಯಕ್ಕೆ ಸಲ್ಲಿಸಲು ಮುಖ್ಯಾಧಿಕಾರಿ ತಿಳಿಸಿದ್ದಾರೆ.

### 12ರಂದು ದಿಶಾ ಸಭೆ

» ಚಿತ್ರದುರ್ಗ

ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ (ದಿಶಾ) ಸಭೆಯನ್ನು ಇದೇ ಜುಲೈ 12ರಂದು ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಚಿತ್ರದುರ್ಗ ಲೋಕಸಭಾ ಸದಸ್ಯರಾದ ಗೋವಿಂದ ಎಂ.ಕಾರಜೋಳ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

---

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಾಜ್ ಸಲಹೆ

# ಮಾದಕ ವಸ್ತುಗಳ ಬಗ್ಗೆ ಜಾಗೃತಿವಹಿಸಿ

» ಚಿತ್ರದುರ್ಗ

ಮಾದಕ ವಸ್ತುಗಳ ವ್ಯಸನಕ್ಕೆ ಒಳಗಾಗದವರು ಮನುಷ್ಯತ್ವ ಮರೆತು ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗುವುದು ಮತ್ತು ಆತ್ಮಹತ್ಯೆ ಅಂತಹ ಕೃತ್ಯಗಳು ನಡೆಯುತ್ತವೆ ಇದರಿಂದ ಮಾದಕ ವಸ್ತುಗಳ ಬಗ್ಗೆ ಜಾಗೃತವಹಿಸಿ ಎಂದು ಜಿಲ್ಲಾ ಮಾನಸಿಕ ಆರೋಗ್ಯಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಾಜ್ ಹೇಳಿದರು.

ನಗರದಜಿಲ್ಲಾಕಾರಾಗೃಹದಲ್ಲಿಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಹಾಗೂ ಜಿಲ್ಲಾ ಕಾರಾಗೃಹ ಇಲಾಖೆ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ಮಾದಕ ವಸ್ತುಗಳ ವ್ಯಸನ ಮತ್ತು ಅಕ್ರಮ ಕಳ್ಳ ಸಾಗಾಣಿಕೆ ವಿರೋಧಿ ದಿನಾಚರಣೆ ಜಾಗೃತಿ ಹಾಗೂ ಮಾನಸಿಕ ಆರೋಗ್ಯ ಚಿಕಿತ್ಸಾ ಶಿಬಿರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿ ವರ್ಷವೂ ಜೂನ್ 26ರಂದು ಅಂತರಾಷ್ಟ್ರೀಯ ಮಾದಕ ವಸ್ತುಗಳ ವ್ಯಸನ ಮತ್ತು ಅಕ್ರಮ ಕಳ್ಳ ಸಾಗಾಣಿಕೆ ವಿರೋಧಿ ದಿನಾಚರಣೆ ಆಚರಿಸಲಾಗುತ್ತದೆ. ಸಾಕ್ಷವು ಸ್ಪಷ್ಟವಾಗಿದೆ ತಡೆಗಟ್ಟುವಲ್ಲಿ ಹೂಡಿಕೆ ಮಾಡಿ ಎಂಬುದು ಈ ಬಾರಿಯ ಘೋಷವಾಕ್ಯವಾಗಿದೆ. ಮಾದಕ ವಸ್ತುಗಳಲ್ಲಿ ಗಾಂಜಾ, ಅಫೀಮ ಮೊದಲಾದವುಗಳು ಮಾತ್ರೆ, ಫೌಡರ್, ಇಂಜೆಕ್ಷನ್ ಹಲವಾರು ರೂಪಗಳಲ್ಲಿ ತೆಗೆದುಕೊಳ್ಳುತ್ತಾರೆ. ಮಾದಕ ವಸ್ತುಗಳನ್ನು ತೆಗೆದುಕೊಳ್ಳುವವರು ಮಾದಕ ವಸ್ತುಗಳ ವ್ಯಸನಿಗಳಾಗಿ ಮಾದಕ ವಸ್ತುಗಳ ದಾಸರಾಗುತ್ತಾರೆ. ಕೋಟ್ಯಾಂತರ ಯುವಕರು ವ್ಯಸನಕ್ಕೆ ಒಳಗಾಗಿ ಹಲವಾರು



ದೈಹಿಕ ಮತ್ತು ಮಾನಸಿಕ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ ಎಂದು ಹೇಳಿದರು.

ವಿವಿಧ ಇಲಾಖೆಗಳ ಸಹಕಾರದೊಂದಿಗೆ ವ್ಯಸನದಿಂದ ಮುಕ್ತವಾಗಿ ಆದರ್ಶ ವ್ಯಕ್ತಿಗಳಾಗಿ ಬಾಳಬೇಕು. ವ್ಯಸನದಿಂದ ಮುಕ್ತರಾಗಲು ಮನೋಚೈತನ್ಯ ಶಿಬಿರಗಳಲ್ಲಿ ಮತ್ತು ಜಿಲ್ಲಾ ಆಸ್ಪತ್ರೆಯಲ್ಲಿ ಮನೋವೈದ್ಯರು, ಕ್ಲಿನಿಕಲ್ ಸೈಕಾಲಜಿಸ್ಟ್ ಅವರನ್ನು ಸಂಪರ್ಕಿಸಿ ಚಿಕಿತ್ಸೆ, ಸಲಹೆ ಮತ್ತು ಸಮಲೋಚನೆ ಪಡೆಯಬಹುದು ಹಾಗೂ ಟೆಲಿ ಮಾನಸ ಉಚಿತ ಸಹಾಯವಾಣಿ ಸಂಖ್ಯೆ 14416 ಗೆ ಕರೆಮಾಡಿ ಸಲಹೆ ಸಮಾಲೋಚನೆ ಪಡೆಯಬೇಕು ಎಂದು ತಿಳಿಸಿದರು.ಮನೋವೈದ್ಯ ಡಾ.ಆರ್. ಮಂಜುನಾಥ್ ಉಪನ್ಯಾಸ ನೀಡಿ, ಬಿಡಿ, ಸಿಗರೇಟ್ ಮತ್ತು ಮಾದಕ ವಸ್ತುಗಳ ಮೇಲೆ ಎಚ್ಚರಿಕೆ ಸಂದೇಶ ಇದ್ದರೂ ನಾವು ಅದನ್ನು ಉಪಯೋಗಿಸುತ್ತೇವೆ. ಯಾಕೆಂದರೆ ಆಹ್ಲಾದ ಅಥವಾ ಕಿಕ್‌ಗಾಗಿ ಸ್ವಲ್ಪದಿಂದ ಶುರು ಮಾಡಿ ಜಾಸ್ತಿ ಮಾದಕ ವಸ್ತುಗಳನ್ನು ತೆಗೆದುಕೊಂಡು ದಿನದಿನಕ್ಕೆ ನರಗಳ ಸವೆತದಿಂದ, ಪ್ರಜ್ಞಾಹೀನ ಸ್ಥಿತಿ ತಲುಪಿ ಸರಿ ತಪ್ಪುಗಳ ಅರಿವು ಇರುವುದಿಲ್ಲ ತಪ್ಪುಗಳ ನಡೆಯುತ್ತವೆ. ಇದಕ್ಕೆ ಕಾರಣ ನಾವು ಸೇವಿಸುವ ಮಾದಕ ವಸ್ತು ಅಥವಾ ದ್ರವ್ಯಗಳು ಕಾರಣವಾಗಿರುತ್ತವೆ. ವ್ಯಸನಿಯಾದಾಗ ಮನುಷ್ಯನು ನಿಯಂತ್ರಣದಲ್ಲಿರುವುದಿಲ್ಲ ವಿವೇಕ ಕಳೆದುಕೊಳ್ಳುತ್ತಾನೆ ಎಂದು ತಿಳಿಸಿದರು.

ಬೇಸಿಕ್ ಡ್ರಗ್ಸ್ ಬಿಡಿ, ಸಿಗರೇಟ್. ಇವುಗಳನ್ನು ಗೇಟ್ ವೇ ಡ್ರಗ್ಸ್ ಅಂತ ಕರೆಯುತ್ತೇವೆ. ವ್ಯಸನದಿಂದ ದೂರವಿದ್ದರೆ ಅಪರಾಧ ಕೃತ್ಯಗಳಿಂದ ದೂರವಿರಬಹುದು. ಮಾದಕ ವಸ್ತುಗಳಿಗೆ ವ್ಯಸನಿಗಳಾಗಬಾರದು. ಚಿಕಿತ್ಸೆಗಾಗಿ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗವನ್ನು ಸಂಪರ್ಕಿಸಿ ಸಲಹೆ ಸಮಾಲೋಚನೆ ಚಿಕಿತ್ಸೆ ಪಡೆಯಬಹುದು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ ಮಾತನಾಡಿ, ನಮ್ಮ ಕುಟುಂಬಗಳು ಸುಖವಾಗಿ ಇರಲು ಜೀವನದಲ್ಲಿ ನೀತಿ ನಿಯಮ ಅಳವಡಿಸಿಕೊಂಡು ಬಾಳಬೇಕು. ನಮ್ಮ ಮಟ್ಟಕ್ಕೆ ತಕ್ಕಂತೆ ಸತ್ಪಜೆಗಳಾಗಿ ಬಾಳಬೇಕು ಎಂದು ತಿಳಿಸಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಮನುಷ್ಯನು ತನ್ನ ಮನಸ್ಸನ್ನು ಹಿಡಿತದಲ್ಲಿ ಇಟ್ಟುಕೊಂಡಿರಬೇಕು. ಮನಸ್ಸು ಹಿಡಿತದಲ್ಲಿ ಇಲ್ಲದಿದ್ದರೆ ಮಾದಕ ವಸ್ತುಗಳಿಗೆ ದಾಸರಾಗಿ ಅಪರಾಧ ಕೃತ್ಯಗಳಲ್ಲಿ ಭಾಗವಹಿಸುತ್ತೇವೆ, ಇನ್ನೂ ಕೂಡ ಕಾಲ ಮಿಂಚಿಲ್ಲ ಇಂದಿನಿಂದಲೇ ದುಶ್ಚಟಗಳಿಂದ ದೂರವಾಗಿ ಎಂದು ಸಲಹೆ ನೀಡಿದರು.

ಜಿಲ್ಲಾ ಕಾರಾಗೃಹ ಅಧೀಕ್ಷಕರಾದ ಮಹದೇವಿ ಎಂ ಮರಕಟ್ಟಿ ಮಾತನಾಡಿ, ಬಿಡಿ ಸಿಗರೇಟ್, ಮದ್ಯ, ಹೆಂಡ ಇವುಗಳನ್ನು ದುಶ್ಚಟಗಳಿಗೆ ಬಳಸುವುದಕ್ಕೆ ಮಾದಕ ವಸ್ತುಗಳೆಂದು ಕರೆಯುತ್ತೇವೆ. ಮಾದಕ ವಸ್ತುಗಳ ಸೇವನೆಯ ಚಟಕ್ಕೆ ಒಳಗಾಗಿ ಅದರ ದುಷ್ಪರಿಣಾಮದಿಂದ ತಪ್ಪುಗಳು ನಡೆದು ಹೋಗುತ್ತವೆ. ಈ ವರ್ಷದ ಘೋಷವಾಕ್ಯದಂತೆ ಸಾಕ್ಷ್ಯಗಳು ಸ್ಪಷ್ಟವಾಗಿವೆ ತಡೆಗಟ್ಟುವಲ್ಲಿ ತೊಡಗಿಸಿಕೊಳ್ಳಿ ಎಂಬಂತೆ ಮನ ಪರಿವರ್ತನೆಯಿಂದ ಬಹಳಷ್ಟು ಜನ ವ್ಯಸನದಿಂದ ಮುಕ್ತರಾಗಿದ್ದಾರೆ. ನೀವು ಮಾದಕ ವಸ್ತುಗಳನ್ನು ತಿಂದರೆ ಮಾದಕ ವಸ್ತುಗಳು ನಿಮ್ಮನ್ನು ತಿನ್ನುತ್ತವೆ. ಯೋಗ ಮತ್ತು ಪಾಣಾಯಾಮದ ಮೂಲಕ ವ್ಯಸನ ಮುಕ್ತರಾಗಬಹುದು. ಅಪರಾಧ ಕೃತ್ಯಗಳಿಂದ ದೂರ ಉಳಿಯಬಹುದು. ಸಮಾಜದಲ್ಲಿ ಸತ್ಪಜೆಯಾಗಿ ಕುಟುಂಬಕ್ಕೆ ಆದರ್ಶ ವ್ಯಕ್ತಿಯಾಗಿ ದುರಾಭ್ಯಾಸ ಚಟಗಳಿಂದ ದೂರ ಉಳಿಯಬೇಕು ಎಂದು ಪ್ರತಿಜ್ಞಾವಿಧಿಯನ್ನು ಕಾರಾಗೃಹ ನಿವಾಸಿಗಳಿಗೆ ಬೋಧಿಸಿದರು.

ಈ ಸಂದರ್ಭದಲ್ಲಿ ಕಾರಾಗೃಹ ಶಿಕ್ಷಕ ಆರ್.ಎ.ಶ್ರೀರಾಮರೆಡ್ಡಿ, ಸಹಾಯಕ ಜೈಲರ್ ರಾಮಣ್ ಕೆ.ಹರ್ಕಲ್, ಹೆಚ್‌ಐಒ ವೈ.ತಿಪ್ಪೇಶ್, ಕ್ಲಿನಿಕಲ್ ಸೈಕಲಾಜಿಸ್ಟ್ ಟಿ.ಶ್ರೀಧರ, ಸೋಶಿಯಲ್ ವರ್ಕರ್ ಎನ್.ಸುನೀತಾ, ಶುಶ್ರೂಷಕಾಧಿಕಾರಿ ಕೆ.ಎಂ.ರಶ್ಮಿ, ಕಾರಾಗೃಹ ಇಲಾಖೆಯ ಎಲ್ಲಾ ಸಿಬ್ಬಂದಿ ವರ್ಗದವರು ಮತ್ತು ಕಾರಾಗೃಹ ನಿವಾಸಿಗಳು ಭಾಗವಹಿಸಿದ್ದರು.

---

# ಸಿಲಿಂಡರ್ ಸ್ಫೋಟ, ಗಾಯಾಳು ಯೋಗಕ್ಷೇಮ ವಿಚಾರಿಸಿದ ಡಿಸಿ



» ದಾವಣಗೆರೆ

ದಾವಣಗೆರೆ ರಾಮನಗರದ ಎಸ್‌ಒಜಿ ಕಾಲೋನಿ ಮನೆಯಲ್ಲಿ ಮಂಗಳವಾರ ಅಡುಗೆ ಅನಿಲದ ಸಿಲಿಂಡರ್ ಸ್ಫೋಟದಿಂದ ಐವರು ಗಂಭೀರವಾಗಿ ಗಾಯಗೊಂಡಿದ್ದು ಎಸ್.ಎಸ್.ಹೈಟೆಕ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಬುಧವಾರ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಅವರು ಎಸ್.ಎಸ್.ಹೈಟೆಕ್ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದರು.

ಒಟ್ಟು 5 ಜನರು ಚಿಕಿತ್ಸೆ ಪಡೆಯುತ್ತಿದ್ದು ವಿಶೇಷ ತಜ್ಞ ವೈದ್ಯರು ನಿಗಾವಹಿಸಿದ್ದಾರೆ. ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಎಲ್ಲಾ ಗಾಯಾಳುಗಳಿಗೆ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಎಲ್ಲಾ ಚಿಕಿತ್ಸೆ ನೀಡಲು ತಿಳಿಸಿದರು.

ಒಟ್ಟು ಐದು ಜನರಲ್ಲಿ ಲಲಿತಮ್ಮ ಇವರಿಗೆ ಹೆಚ್ಚಿನ ಗಾಯವಾಗಿದೆ, ಸೌಭಾಗ್ಯ, ಪಾರ್ವತಮ್ಮ ಇವರಿಗೆ ಶೇ 50 ಕ್ಕಿಂತ ಹೆಚ್ಚು ಗಾಯವಾಗಿದೆ. ಉಳಿದ ಇಬ್ಬರಿಗೆ ಶೇ 50 ಕ್ಕಿಂತ ಕಡಿಮೆ ಇದೆ. ಗಾಯವು ನಂಜಾಗದಂತೆ ನೋಡಿಕೊಂಡು ಅತ್ಯುತ್ತಮ ಚಿಕಿತ್ಸೆ ನೀಡುವ ಮೂಲಕ ಗುಣಮುಖರಾಗುವಂತೆ ನೋಡಿಕೊಳ್ಳಲು ತಿಳಿಸಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಹಾಗೂ ಜಿಲ್ಲಾ ಸರ್ಜನ್ ಅವರು ಗಾಯಾಳುಗಳ ನಿಗಾವಹಿಸಲು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ಷಣ್ಮುಖಪ್ಪ, ಚಿಗಟೇರಿ ಆಸ್ಪತ್ರೆ ಸರ್ಜನ್ ಡಾ; ನಾಗೇಂದ್ರಪ್ಪ ಹಾಗೂ ಎಸ್.ಎಸ್.ಹೈಟೆಕ್ ಆಸ್ಪತ್ರೆ ವೈದ್ಯರು ಉಪಸ್ಥಿತರಿದ್ದರು.

---

ಸಿನಿಮೊಗೆ-ಶಿವಮೊಗ್ಗ ಚಿತ್ರ ಸಮಾಜ ಆಯೋಜನೆ

# ರಾಜ್ಯಮಟ್ಟದ ಅಂಬೆಗಾಲು ಕಿರು ಚಿತ್ರಸ್ಪರ್ಧೆ



» ಶಿವಮೊಗ್ಗ

ನಗರದ ಸಿನಿಮೊಗೆ – ಶಿವಮೊಗ್ಗ ಚಿತ್ರ ಸಮಾಜದ ವತಿಯಿಂದ ಇದೀಗ ರಾಜ್ಯ ಮಟ್ಟದ ಅಂಬೆಗಾಲು – 6 ಕಿರು ಚಿತ್ರ (ಶಾರ್ಟ್ ಫಿಲಂ) ಸ್ಪರ್ಧೆಯನ್ನು ಆಯೋಜಿಸಲಾಗಿದೆ ಎಂದು ಬೆಳ್ಳಿಮಂಡಲದ ಕಾರ್ಯಾಧ್ಯಕ್ಷರು ಹಾಗೂ ಅಂಬೆಗಾಲು ಕಿರುಚಿತ್ರ ಸ್ಪರ್ಧೆಯ ಸಂಚಾಲಕರೂ ಅದ ಡಿ. ಎಸ್. ಅರುಣ್ ತಿಳಿಸಿದರು.ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅಂಬೆಗಾಲು – 6 ಕಿರುಚಿತ್ರ ಸ್ಪರ್ಧೆಯ ಲಾಂಛನವನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಕಳೆದ ನಾಲ್ಕು ವರ್ಷಗಳಲ್ಲಿ ನಡೆದ ಅಂಬೆಗಾಲು ಕಿರುಚಿತ್ರ ಸ್ಪರ್ಧೆಗಳಲ್ಲಿ ಶಿವಮೊಗ್ಗ ಹಾಗೂ ಸುತ್ತಮುತ್ತಲಿನ ಕ್ರಿಯಾಶೀಲ ನಿರ್ದೇಶಕರು, ತಂತ್ರಜ್ಞರು ಪಾಲ್ಗೊಂಡು ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಲ್ಪಟ್ಟಿರುವುದು ಹೆಮ್ಮೆಯ ಸಂಗತಿ.ಈ ಸ್ಪರ್ಧೆಗಳಲ್ಲಿ ಪ್ರಶಸ್ತಿ ಪುರಸ್ಕೃತರಾದ ಫನ್ಮಂಡ್ರಿ ಕ್ರಾಸ್, ಹೆಕ್ಕೆಮನೆ, ಚೌಕಿ, ಅನಲಾ, ಕುರ್ಲಿ, ದಾಳಿ, ಭ್ರಾಂತು, ಖೇಜ್, ಕಲಾಂ ಹಿಂದೂಸ್ಥಾನಿ, ಬ್ಲೌಸ್, ನೊಂದವರ ಯುವಕರು ಸಂಘ, ದೂರದರ್ಶನ, ಸೌಮ್ಯ.. ಮೊದಲಾದ ಪ್ರಶಸ್ತಿ ಪುರಸ್ಕೃತ ಚಿತ್ರಗಳು ರಾಜ್ಯ ಮಟ್ಟದಲ್ಲಿ ಗಮನ ಸೆಳೆದಿದೆಯಲ್ಲದೇ, ಅನೇಕ ಚಿತ್ರೋತ್ಸವಗಳಲ್ಲಿಯೂ ಪ್ರದರ್ಶನಗೊಂಡು ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಗಿದೆ. ಈಗ ಆರನೇ ವರ್ಷದಲ್ಲಿ ಈ ರಾಜ್ಯಮಟ್ಟದ ಅಂಬೆಗಾಲು – 6 ಕಿರು ಚಿತ್ರ ಸ್ಪರ್ಧೆಯನ್ನು ಆಯೋಜಿಸಲಾಗುತ್ತಿದ್ದು, ರಾಜ್ಯದೆಲ್ಲೆಡೆಯಿಂದ ಶ್ರೇಷ್ಠ ಗುಣಮಟ್ಟದ ಕಿರು ಚಿತ್ರಗಳನ್ನು ನಿರೀಕ್ಷಿಸಲಾಗಿದೆ ಎಂದರು.ಯುವಜನತೆಯಲ್ಲಿ ಚಲನಚಿತ್ರ ಕುರಿತಾಗಿ ಅರಿವು ಮೂಡಿಸುವ ಹಾಗೂ ಅವರಲ್ಲಿನ ಸೃಜನಶೀಲತೆಯನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಈ ಕಿರುಚಿತ್ರ ಸ್ಪರ್ಧೆಯನ್ನು ಅಯೋಜಿಸಲಾಗಿದ್ದು, ಶೀರ್ಷಿಕೆ ಹಾಗೂ ಟೈಟಲ್ ಕಾರ್ಡ್ ಸೇರಿ 5 ರಿಂದ 7 ನಿಮಿಷಗಳ ಕಿರುಚಿತ್ರಗಳನ್ನು ಸ್ಪರ್ಧೆಗೆ ಕಳುಹಿಸಬಹುದು ಎಂದ ಅವರು, ಮೊಬೈಲ್ ಸೇರಿದಂತೆ ಯಾವುದೇ ಕ್ಯಾಮರಾವನ್ನು ಬಳಸಿ ಚಿತ್ರೀಕರಿಸಬಹುದಾಗಿದ್ದು, ಸಾಮಾಜಿಕ ಜಾಲತಾಣಗಳೂ ಸೇರಿದಂತೆ ಯಾವುದೇ ಮಾಧ್ಯಮಗಳಿಗಿಂದ ದೃಶ್ಯಗಳನ್ನು ಕಟ್ ಅಂಡ್ ಪೇಸ್ಟ್ ಆಗಲೀ, ಸಾಕ್ಷ್ಯಚಿತ್ರವನ್ನಾಗಲೀ ಅಥವಾ ಸಂಪೂರ್ಣ ಎನಿಮೇಷನ್ ಚಿತ್ರಗಳನ್ನಾಗಲೀ ಸ್ಪರ್ಧೆಗೆ ಕಳಿಸುವಂತಿಲ್ಲ. ಸಂಪೂರ್ಣವಾಗಿ ಸ್ವಂತಿಕೆಯ ನಿರ್ದೇಶನದ ಯಾವುದೇ ವಿಷಯವನ್ನು ಕುರಿತು ಕಿರು ಚಿತ್ರ ನಿರ್ಮಿಸಬಹುದು. ಹಾಸ್ಯ ಕಥಾನಕವುಳ್ಳ ಕಿರುಚಿತ್ರಗಳಿಗೆ ವಿಶೇಷ ಆದ್ಯತೆಯಿದೆ ಎಂದರು.

---

## ಪ್ರಮುಖ ಸುದ್ದಿ

ವಿದ್ಯಾರ್ಥಿ ನಿಲಯಕ್ಕೆ ರಾಜ್ಯ ಮಾನವ ಹಕ್ಕುಗಳ ಆಯೋಗದ ಸದಸ್ಯ ಎಸ್.ಕೆ.ವೆಂಟಿಗೋಡಿ ಭೇಟಿ

# ಪಠ್ಯದ ಜತೆಗೆ ಸ್ಪರ್ಧಾತ್ಮಕ ಪರೀಕ್ಷೆಗೂ ತಯಾರಾಗಿ

» ಚಿತ್ರದುರ್ಗ

ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೂ ಹೆಚ್ಚಿನ ಮಟ್ಟದಲ್ಲಿ ತಯಾರಾಗಬೇಕು ಎಂದು ರಾಜ್ಯ ಮಾನವ ಹಕ್ಕುಗಳ ಆಯೋಗದ ನ್ಯಾಯಾಂಗದ ಸದಸ್ಯ ಎಸ್.ಕೆ.ವೆಂಟಿಗೋಡಿ ಸಲಹೆ ನೀಡಿದರು.

ನಗರದ ಸರ್ಕಾರಿ ಕಲಾ ಕಾಲೇಜು ಹಿಂಭಾಗದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಈಚೆಗೆ ಅನಿರೀಕ್ಷಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಈ ವೇಳೆ ವಿದ್ಯಾರ್ಥಿನಿಯರೊಂದಿಗೆ ಸಂವಾದ ನಡೆಸಿ ನಿಲಯದಲ್ಲಿನ ವ್ಯವಸ್ಥೆಯ ಬಗ್ಗೆ ಹಾಗೂ ಉಟೋಪಚಾರದ ಬಗ್ಗೆ ಮಾಹಿತಿ ಪಡೆದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳು ನಿಲಯದ ಸೌಲಭ್ಯಗಳು ಹಾಗೂ ಊಟೋಪಚಾರ ಉತ್ತಮ ರೀತಿಯಲ್ಲಿರುವುದಾಗಿ ತಿಳಿಸಿದರು.ಸರ್ಕಾರ ನೀಡುತ್ತಿರುವ ಅವಕಾಶ ಗಳನ್ನು



ವಿದ್ಯಾರ್ಥಿಗಳು ಸಂಪೂರ್ಣವಾಗಿ ಸದುಪಯೋಗಪಡಿಸಿಕೊಳ್ಳಬೇಕು. ವಿದ್ಯಾರ್ಥಿಗಳ ಸುರಕ್ಷತೆಯ ಕುರಿತು ನಿಲಯಗಳಲ್ಲಿ ಕಾರ್ಯಕ್ರಮಗಳನ್ನು ಮಾಡಿ ಜಾಗೃತಿ ಮೂಡಿಸಲು ಅಧಿಕಾರಿಗಳಿಗೆ ಸೂಚಿಸಿದರು.ನಿಲಯದ ಸ್ವಚ್ಛತೆ, ವಿದ್ಯಾರ್ಥಿಗಳ ವ್ಯಾಸಂಗ, ವಿದ್ಯಾರ್ಥಿಗಳ ಆರೋಗ್ಯ, ನಿಲಯದ ಸುತ್ತಮುತ್ತಲಿನ ವಾತಾವರಣ ಸ್ವಚ್ಛವಾಗಿಟ್ಟುಕೊಳ್ಳಲು ಸೂಚಿಸಿದರು. ನಿಲಯದ ಅಡುಗೆಮನೆ, ಉಗ್ರಾಣ ಮತ್ತು ವಿದ್ಯಾರ್ಥಿಗಳ ಕೊಠಡಿಗಳನ್ನು ಪರಿಶೀಲಿಸಿ ನಿಲಯ ನಿರ್ವಹಣೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ನಂತರ ಸಮಾಜಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಉತ್ತಮ ಗಾಳಿ ಬೆಳಕಿನ ವ್ಯವಸ್ಥೆ ಮಾಡಲು ಅಧಿಕಾರಿಗಳಿಗೆ ತಿಳಿಸಿದರು. ನಿಲಯ ನಿರ್ವಹಣೆಯು ಉತ್ತಮವಾಗಿರುವುದಾಗಿ ಅಭಿಪ್ರಾಯಿಸಿ, ಸಂಬಂಧಪಟ್ಟ ಅಧಿಕಾರಿಗಳು ಮೇಲಿಂದ ಮೇಲೆ ವಿದ್ಯಾರ್ಥಿ ನಿಲಯಗಳಿಗೆ ಭೇಟಿ ಪರಿಶೀಲಿಸಲು ಸೂಚಿಸಿದರು.

**ಜಿಲ್ಲಾ ಕಾರಾಗೃಹಕ್ಕೆ ಭೇಟಿ:** ಚಿತ್ರದುರ್ಗ ಜಿಲ್ಲಾ ಕಾರಾಗೃಹಕ್ಕೆ ಭೇಟಿ ನೀಡಿದ ರಾಜ್ಯ ಮಾನವ ಹಕ್ಕುಗಳ ಆಯೋಗದ ನ್ಯಾಯಾಂಗದ ಸದಸ್ಯ ಎಸ್.ಕೆ.ವೆಂಟಿಗೋಡಿ ಅವರು ಅಲ್ಲಿನ ಖೈದಿಗಳೊಂದಿಗೆ ಸಂವಾದಿಸಿ ಯೋಗ ಕ್ಷೇಮದ ಕುರಿತು ವಿಚಾರಿಸಿದರು. ಕಾರಾಗೃಹದಲ್ಲಿ ನೀಡುವಂತಹ ಊಟದ ವ್ಯವಸ್ಥೆಯ ಕುರಿತು ಪರಿಶೀಲಿಸಿದರು. ಶೌಚಾಲಯ, ಸ್ನಾನಗೃಹಗಳಲ್ಲಿ ಸ್ವಚ್ಛತೆ ಕುರಿತು ಪರಿಶೀಲಿಸಿದರು. ಸಂದರ್ಶಕರ ಪುಸ್ತಕ, ಕೈದಿಗಳ ರಿಜಿಸ್ಟರ್, ಸಿ.ಸಿ.ಕ್ಯಾಮೆರಾ ಕುರಿತು ಹಾಗೂ ಇತರೆ ಸೌಲಭ್ಯಗಳ ಬಗ್ಗೆ ಮತ್ತು ಭದ್ರತೆ ಕುರಿತು ಪರಿಶೀಲಿಸಿದರು.ಈ ಸಂದರ್ಭದಲ್ಲಿ ಚಿತ್ರದುರ್ಗ ತಹಶೀಲ್ದಾರ್ ಡಾ.ಕೆ.ನಾಗವೇಣಿ, ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪುಷ್ಪಲತಾ ಭಾವಿಮಠ, ತಾಲ್ಲೂಕು ಸಮಾಜಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಕೃಷ್ಣಮೂರ್ತಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಆಯ್ಕೆ ಸಮಿತಿ ರಚನೆ: ಪ್ರಶಸ್ತಿಗೆ ನಾಮ ನಿರ್ದೇಶನಗಳ ಆಹ್ವಾನ

» **ಚಿತ್ರದುರ್ಗ**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ 2019ನೇ ಕ್ಯಾಲೆಂಡರ್ ವರ್ಷದಿಂದ 2023ನೇ ಕ್ಯಾಲೆಂಡರ್ ವರ್ಷಗಳಿಗೆ ಟೀಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ ಹಾಗೂ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಆಯ್ಕೆ ಸಮಿತಿ ರಚಿಸಲಾಗಿದ್ದು,ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

ಆಯ್ಕೆ ಸಮಿತಿ: ಹೈಕೋರ್ಟ್ ನಿವೃತ್ತ ನ್ಯಾಯಾಧೀಶರಾದ ಪಿ.ಎನ್.ದೇಸಾಯಿ ಅವರ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಹಿರಿಯ ಪತ್ರಕರ್ತರಾದ ಡಾ.ಈಶ್ವರ ದೈತೋಟ,ಶಾಂತಲಾ ಧರ್ಮರಾಜ್ ಹಾಗೂ ಎಂ.ಎಸ್.ಮಣಿ ಸದಸ್ಯರಾಗಿದ್ದಾರೆ.ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ. ಟಿಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ: ಕನ್ನಡದ ಹಿರಿಯ ಪರ್ತಕರ್ತ ಟಿ.ಎಸ್. ರಾಮಚಂದ್ರರಾವ್ ಅವರ ನೆನಪಿನಲ್ಲಿಸರ್ಕಾರ ಟಿಯೆಸ್ಸಾರ್ ನಿಡುತ್ತಾ ಬಂದಿದೆ. ಪ್ರಶಸ್ತಿಯ ಮೊತ್ತ 2 ಲಕ್ಷ ರೂ ಆಗಿದ್ದು, ಕನ್ನಡ ಪತ್ರಿಕೋದ್ಯಮ, ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮದಲ್ಲಿ ಅಥವಾ ಎರಡರಲ್ಲೂ ಒಟ್ಟಿಗೆ ಕನಿಷ್ಠ 30 ವರ್ಷಗಳ ಸೇವೆ ಸಲ್ಲಿಸಿರಬೇಕು. ಜೊತೆಗೆ ಕನ್ನಡ ಕ್ಷೇತ್ರಕ್ಕೆ ಭಾಷೆಯ ಬೆಳವಣಿಗೆಗೆ ವಿಶೇಷ ಕೊಡುಗೆ ನೀಡಿರುವವರನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರತಿ ಕ್ಯಾಲೆಂಡರ್ ವರ್ಷಕ್ಕೆ ಒಬ್ಬರಿಗೆ ಮಾತ್ರ ಈ ಪ್ರಶಸ್ತಿಯನ್ನು ನೀಡಲಾಗುವುದು.ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ: ಪತ್ರಿಕಾ ರಂಗದ ಭೀಷ್ಮರೆಂದೇ ಹೆಸರಾದ ಮೊಹರೆ ಹಣಮಂತರಾಯ ಅವರ ನೆನಪಿನಲ್ಲಿ ಸರ್ಕಾರವು ಪ್ರಶಸ್ತಿ ನೀಡುತ್ತಾ ಬಂದಿದೆ. ಪ್ರಶಸ್ತಿಯ ಮೊತ್ತವು 2 ಲಕ್ಷ ರೂ ಆಗಿದ್ದು, ಕನ್ನಡದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಯಾವುದೇ ಪತ್ರಿಕೆಯನ್ನು ಅಥವಾ ಪತ್ರಿಕಾ ಸಮೂಹವನ್ನು ಸಮರ್ಥವಾಗಿ ಕಟ್ಟಿ ಬೆಳೆಸಿದ ಹಾಗೂ ಪ್ರವೃತ್ತಿಯಲ್ಲಿ ಪತ್ರಕರ್ತರಾಗಿ, ವೃತ್ತಿಯಲ್ಲಿ ಪತ್ರಿಕಾಲಯದ ಮಾಲೀಕರು, ಆಡಳಿತಗಾರರಾಗಿ ಕನಿಷ್ಠ 30 ವರ್ಷ ಸೇವೆ ಸಲ್ಲಿಸಿರಬೇಕು.ಪ್ರಶಸ್ತಿಗಳಿಗೆ ನಾಮನಿರ್ದೇಶನಗಳನ್ನು, ಮಾಧ್ಯಮ ಸಂಸ್ಥೆಗಳು ಹಾಗೂ ಇತರೆ ಸಂಘ ಸಂಸ್ಥೆಗಳು ಮತ್ತು ವ್ಯಕ್ತಿಗಳು ಪೂರ್ಣ ದಾಖಲೆಗಳೊಂದಿಗೆ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾಸೌಧ, ನಂ. 17, ಭಗವಾನ್ ಮಹಾವೀರರಸ್ತೆ, ಬೆಂಗಳೂರು 560 001 ಇಲ್ಲಿಗೆ 2024ನೇ ಜುಲೈ 25ರ ಸಂಜೆ 5.30 ಗಂಟೆ ಒಳಗಾಗಿ ಕಳುಹಿಸಿಕೊಡಬಹುದಾಗಿದೆ. ಅಥವಾ ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿ ಮೂಲಕ ಇಲ್ಲವೇ tsraward@gmail.com ಇಮೇಲ್ ವಿಳಾಸಕ್ಕೆ ಕೊನೆಯ ದಿನಾಂಕದೊಳಗೆ ಕಳುಹಿಸಿಕೊಡಬಹುದಾಗಿದೆ.

### ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಉಚಿತ ಚಿಕಿತ್ಸೆ

» **ಚಿತ್ರದುರ್ಗ**

ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ಸರ್ಕಾರದ ಒಂದು ಪ್ರತಿಷ್ಠಿತ ಸಂಸ್ಥೆಯಾಗಿದ್ದು, ಗುಣಮಟ್ಟದ ಕ್ಯಾನ್ಸರ್ ಚಿಕಿತ್ಸೆಗೆ ಹೆಸರುವಾಸಿಯಾದ ಆಸ್ಪತ್ರೆಯಾಗಿದೆ. ಕರ್ನಾಟಕದ ಎಲ್ಲಾ ಜಿಲ್ಲೆಗಳ ಹಾಗೂ ಹೊರ ರಾಜ್ಯಗಳ ಸಾರ್ವಜನಿಕರು ಕ್ಯಾನ್ಸರ್ ಚಿಕಿತ್ಸೆಗೆ ಕಿದ್ವಾಯಿ ಆಸ್ಪತ್ರೆಯನ್ನು ಆಶ್ರಯಿಸಿದ್ದಾರೆ. ಬಡತನ ರೇಖೆಗಿಂತ ಕೆಳಗಿರುವ ಜನರಿಗೆ ಉಚಿತ ಚಿಕಿತ್ಸೆ ಹಾಗೂ ಬಡತನ ರೇಖೆಗಿಂತ ಮೇಲಿರುವ ಜನರಿಗೆ ಅತೀ ಕಡಿಮೆ ದರದಲ್ಲಿ ಚಿಕಿತ್ಸೆಯನ್ನು ಒದಗಿಸುತ್ತಿದೆ. ಅದೇ ರೀತಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೂ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಉಚಿತವಾಗಿ ಗುಣಮಟ್ಟದ ಚಿಕಿತ್ಸೆಯನ್ನುನೀಡಲಾಗುತ್ತಿದೆ.ಕಿದ್ವಾಯಿಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡವರ ದಾಖಲೆಗಳನ್ನು ಪರಿಶೀಲಿಸಿದಾಗ ಬಹಳ ಕಡಿಮೆ ಸಂಖ್ಯೆಯಲ್ಲಿ ಪರಿಶಿಷ್ಟ ಪಂಗಡದ ಎಸ್.ಟಿ.ಜನಾಂಗದವರು ಚಿಕಿತ್ಸೆ ಪಡೆದುಕೊಳ್ಳುತ್ತಿರುವುದು ಕಂಡು ಬಂದಿದೆ. ಜಿಲ್ಲೆಯಲ್ಲಿ ಹೆಚ್ಚು ಪರಿಶಿಷ್ಟ ಪಂಗಡದವರು ವಾಸಿಸುತ್ತಿರುವುದರಿಂದ, ಕ್ಯಾನ್ಸರ್ ರೋಗದಿಂದ ಬಳಲುತ್ತಿರುವವರು ಬೆಂಗಳೂರಿನ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಉಚಿತವಾಗಿ ಸರ್ಕಾರಿ ಸೌಲಭ್ಯ ಪಡೆಯಬಹುದು ಎಂದು ಚಿತ್ರದುರ್ಗ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಷ್ಟ್ರ ಪ್ರಶಸ್ತಿಗೆ ಅರ್ಜಿ

» **ಚಿತ್ರದುರ್ಗ**

ವಿಕಲಚೇತನರ ಸಬಲೀಕರಣಕ್ಕಾಗಿ ಜಿಲ್ಲೆಯ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವ್ಯಕ್ತಿ, ಸಂಸ್ಥೆಗಳಿಂದ ರಾಷ್ಟ್ರ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅರ್ಜಿಗಳನ್ನು www.awards.gov.in ಮತ್ತು www.depwd.gov.in ನ ಮೂಲಕ ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯೊಂದಿಗೆ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ಅರ್ಜಿದಾರರ, ವ್ಯಕ್ತಿಗಳ ಅಥವಾ ಸಂಸ್ಥೆಗಳ ಸ್ವವಿವರ ಹಾಗೂ ಸಾರಾಂಶ ಪೂರಕ ದಾಖಲೆಗಳು ಮತ್ತು ಡ್ರಾಫ್ಟ್ ಸೈಟೇಷನ್(1 ಪುಟಕ್ಕೆ ಮೀರದಂತೆ) ಅಗತ್ಯ ದಾಖಲೆಗಳೊಂದಿಗೆ ಚಿತ್ರದುರ್ಗ ನಗರದ ಸ್ಟೇಡಿಯಂ ರಸ್ತೆಯ ಜಿಲ್ಲಾ ಬಾಲಭವನ ಆವರಣದಲ್ಲಿರುವ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ ದೂರವಾಣಿ ಸಂಖ್ಯೆ 08194–235284 ಹಾಗೂ 08392–267886 ಗೆ ಸಂಪರ್ಕಿಸಬಹುದು.

### ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ಆರ್‌ಓ ಘಟಕ ಸರಿಪಡಿಸಿ, ಶುದ್ಧ ನೀರು ಪೂರೈಸಿ

» **ಚಿತ್ರದುರ್ಗ**

ಜಿಲ್ಲೆಯಲ್ಲಿ ದುರಸ್ಥಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಕೂಡಲೆ ಸರಿಪಡಿಸಿ, ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆಗೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಇದೇ ಜುಲೈ 8 ಮತ್ತು 9 ರಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿ ಸಿಇಒ ಅವರೊಂದಿಗೆ ಸಭೆ ನಡೆಯಲಿರುವ ಹಿನ್ನೆಲೆಯಲ್ಲಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಏರ್ಪಡಿಸಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡುವುದು ಮೊದಲ ಆದ್ಯತೆಯಾಗಿದ್ದು, ದುರಸ್ಥಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ತಕ್ಷಣವೇ ಸರಿಪಡಿಸಿ, ಕಾರ್ಯಾರಂಭ ಮಾಡುವಂತೆ ಕ್ರಮವಹಿಸಬೇಕು. ಇದರ ಜೊತೆಗೆ ಕುಡಿಯುವ ನೀರಿನ ವಿತರಣೆ ವ್ಯವಸ್ಥೆಯಲ್ಲಿ ಸಮಸ್ಯೆಗಳಿದ್ದರೂ ಬಗೆಹರಿಸಿ, ನೀರು ಪೂರೈಕೆಗೆ ಅಗತ್ಯ ಕ್ರಮವಹಿಸಬೇಕು ಎಂದು ಹೇಳಿದರು.

ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಜಿಲ್ಲೆಯ ಎಲ್ಲ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಎಷ್ಟು ನೀರಿನ ಮಾದರಿಯ ಪರೀಕ್ಷೆಗಳನ್ನು ಕೈಗೊಳ್ಳಲಾಗಿದೆ ಎಂಬ ವರದಿ ಸಲ್ಲಿಸಬೇಕು. ನಿಯಮಿತವಾಗಿ ನೀರಿನ ಪರೀಕ್ಷೆ ನಡೆಸಿ, ಶುದ್ಧ ಕುಡಿಯುವ ನೀರು ಪೂರೈಕೆಗೆ ಕ್ರಮವಹಿಸಬೇಕು. ಯಾವುದೇ ಕಾರಣಕ್ಕೂ ಕವಾಡಿಗರಹಟ್ಟಿಯಲ್ಲಿಸಂಭವಿಸಿದಕಲುಷಿತ ನೀರು ಸೇವನೆಯ ಪ್ರಕರಣದಂತಹ ಘಟನೆಗಳು ಮರುಕಳಿಸುವಂತಾಗಬಾರದು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಬಿಪಿಎಲ್ ಮತ್ತು ಎಪಿಎಲ್ ಕಾರ್ಡ್‌ನವರಿಗೆ ಸರ್ಕಾರದಿಂದ ವೈದ್ಯಕೀಯ ವೆಚ್ಚ ಭರಿಸುವ ಸೌಲಭ್ಯವಿದ್ದು, ಜಿಲ್ಲೆಯಲ್ಲಿ ಈ ಯೋಜನೆಯಡಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿಗೆ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣು ಪ್ರಸಾದ್ ಅವರಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ 18 ಲಕ್ಷ ಜನಸಂಖ್ಯೆ ಇದ್ದು, ಸಿಎಸ್‌ಸಿ ಹಾಗೂ ನಾಡಕಚೇರಿಗಳಲ್ಲಿಯೂ ಎಬಿಎಆರ್‌ಕೆ ಕಾರ್ಡ್ ನೋಂದಣಿಗೆ ಕ್ರಮವಹಿಸುವಂತೆ ತಾಕೀತು ಮಾಡಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಮಾತನಾಡಿ, ಎಬಿಎಆರ್‌ಕೆ ಯೋಜನೆಯಡಿ ಜಿಲ್ಲೆಯಲ್ಲಿ 14.97 ಲಕ್ಷ ಗುರಿ ನಿಗಧಿಪಡಿಸಲಾಗಿದ್ದು, ಇದುವರೆಗೂ 5.94 ಲಕ್ಷ ನೋಂದಣಿಯಾಗಿದ್ದು, ಶೇ.40 ರಷ್ಟು ಪ್ರಗತಿ ಸಾಧಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿಗೆ ಕ್ರಮವಹಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯು ಫಲಿತಾಂಶಹೆಚ್ಚಳಕ್ಕೆಅಗತ್ಯಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶಾಲಾ–ಕಾಲೇಜು ವಿದ್ಯಾರ್ಥಿಗಳನ್ನು ಮೊಬೈಲ್ ಗೀಳಿನಿಂದ ಹೊರತಂದು, ಶಿಕ್ಷಕರು ಉತ್ತಮ ಬೋಧನಾ ವಿಧಾನಗಳನ್ನು ಅಳವಡಿಸಿಕೊಂಡು ಬೋಧನೆ ಮಾಡಬೇಕು. ಶಿಕ್ಷಕರಿಗೆ ವಿಷಯಾವಾರು ಪುನಶ್ಚೇತನ ಕಾರ್ಯಾಗಾರಗಳನ್ನು ಏರ್ಪಡಿಸಿ, ಎಸ್‌ಎಸ್‌ಎಲ್‌ಸಿ ಹಾಗೂ ಪಿಯು ಫಲಿತಾಂಶ ಹೆಚ್ಚಳ ಪಡಿಸುವ ನಿಟ್ಟಿನಲ್ಲಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳನ್ನು ಶೇ.100ರಷ್ಟು ಅನುಷ್ಠಾನ ಮಾಡಬೇಕು. ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಎದುರಾಗುವ ಇ–ಕೆವೈಸಿ ಸೇರಿದಂತೆ ಇನ್ನಿತರೆ ಕೆಲವು ತಾಂತ್ರಿಕ ದೋಷಗಳನ್ನು ಶೀಘ್ರದಲ್ಲಿ ಬಗೆಹರಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ರಾಜ್ಯ ಸರ್ಕಾರದ ಶಕ್ತಿ ಯೋಜನೆ, ಗೃಹಲಕ್ಷ್ಮೀ,ಅನ್ನಭಾಗ್ಯ,ಗೃಹಜ್ಯೋತಿಹಾಗೂ ಯುವನಿಧಿ ಸೇರಿದಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡುವ ನಿಟ್ಟಿನಲ್ಲಿ ಅರ್ಹ ಫಲಾನುಭವಿಗಳಿಗೆ ಯೋಜನೆಯ ಲಾಭವನ್ನು ದೊರಕಿಸಿಕೊಡಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಅಗತ್ಯ ಕ್ರಮವಹಿಸಬೇಕು ಎಂದು ಬೆಸ್ಕಾಂ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ಅಂಬೇಡ್ಕರ್ ಅಭಿವೃದ್ಧಿ ನಿಗಮ, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ, ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮ ಸೇರಿದಂತೆ ವಿವಿಧ ಅಭಿವೃದ್ಧಿ ನಿಗಮಗಳ ಗಂಗಾ ಕಲ್ಯಾಣ ಯೋಜನೆಯ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಬಾಕಿ ಇರುವ ಅರ್ಜಿಗಳ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಶೀಘ್ರದಲ್ಲಿ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮವಹಿಸಬೇಕು ಎಂದು ಸೂಚಿಸಿದರು.

ಜಲಜೀವನ್ ಮಿಷನ್ ಯೋಜನೆಯಡಿ ಎಲ್ಲ ಶಾಲೆ, ಅಂಗನವಾಡಿ ಹಾಗೂ ವಸತಿ ನಿಲಯಗಳಿಗೆ ಕುಡಿಯುವ ನೀರು ಸಂಪರ್ಕ ಕಲ್ಪಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

### ತಮ್ಮ ಜಮೀನಿನ ಮಾಹಿತಿ ತಾವೇ ದಾಖಲಿಸಿಕೊಳ್ಳುವ ಅವಕಾಶ ಸರ್ಕಾರ ಮಾಡಿಕೊಟ್ಟಿದೆ

# ರೈತರು ಹೆಚ್ಚು ಸದುಪಯೋಗವನ್ನು ಪಡೆಯಬೇಕು

» **ಚಳ್ಳಕೆರೆ**

ಗ್ರಾಮೀಣ ಭಾಗಗಳಲ್ಲಿ ರೈತರು ತಮ್ಮ ಜಮೀನುಗಳಲ್ಲಿ ಬೆಳೆದ ಬೆಳೆಯನ್ನು ತಮ್ಮ ಮೊಬೈಲ್ ಮೂಲಕ ಅಪ್ಲೋಡ್ ಮಾಡುವ ಅವಕಾಶವನ್ನು ಸರ್ಕಾರ ನೀಡಿದ್ದು, ಇದರ ಪ್ರಯೋಜನವನ್ನು ರೈತ ಸಮುದಾಯ ಪೂರ್ಣಪ್ರಮಾಣದಲ್ಲಿ ಪಡೆಯುವಂತೆ ಪರಶುರಾಮಪುರ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಜೀವನ್ ಮನವಿ ಮಾಡಿದರು.



ಅವರು, ಪರಶುರಾಮಪುರ ಕಾವಲು ತಿಮ್ಮಣ್ಣನವರ ರಿ, ಸರ್ವೆ ನಂ. 115ರ ಜಮೀನಿಗೆ ರೈತರೊಂದಿಗೆ ಭೇಟಿ ನೀಡಿ ಬೆಳೆ ಯಾಪ್ ಬಗ್ಗೆ ರೈತರಿಗೆ ಮನವರಿಕೆ ಮಾಡಿಕೊಟ್ಟರು. ಈ ಸಂದರ್ಭದಲ್ಲಿ ರೈತರೊಡನೆ ಚರ್ಚಿಸಿದ ಅವರು ತಮ್ಮ ಮೊಬೈಲ್ ಮೂಲಕವೇ ಅಪ್ಲೋಡ್ ಮಾಡುವ ಅವಕಾಶವಿದೆ.

ತಾವೇ ಸ್ವತಃ ಗೂಗಲ್‌ಪ್ಲೆಸ್ಟೋರ್‌ನಲ್ಲಿ ಯಾಪ್ ಪಡೆದು ನಿಮ್ಮ ಬೆಳೆಗಳನ್ನು ಅಪ್ಲೋಡ್ ಮಾಡಬಹುದಾಗಿದೆ. ರೈತರು ಯಾವುದೇ ಸಮಸ್ಯೆ ಇದ್ದರೆ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡುವಂತೆ ಅವರು ಮನವಿ ಮಾಡಿದರು.

ರೈತಕಾವಲುತಿಮ್ಮಣ್ಣಮಾತನಾಡಿ, ನಮ್ಮ ಜಮೀನಿನಲ್ಲಿ ಬೆಳೆದ ಬೆಳೆಯ ಬಗ್ಗೆ ಯಾಪ್ ಮೂಲಕ ಅಪ್ಲೋಡ್ ಮಾಡುವುದನ್ನು ಪ್ರಾತ್ಯಕ್ಷಕವಾಗಿ ರೈತರಿಗೆ ಮನವರಿಕೆ ಮಾಡಿಕೊಡಲು ಅಧಿಕಾರಿಗಳು ಬಂದಿರುವುದು ಸಂತಸ. ಆದರೆ, ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಭಾಗದಲ್ಲಿ ವಿದ್ಯುತ್ ಕೈಕೊಡುವುದರಿಂದ ತೊಂದರೆಯಾಗುತ್ತಿದೆ. ಸಾಕಷ್ಟು ರೈತರಿಗೆ ಮೊಬೈಲ್ ಜ್ಞಾನವಿರುವುದಿಲ್ಲ. ಆದ್ದರಿಂದ ಕೃಷಿ ಇಲಾಖೆ ಅಧಿಕಾರಿಗಳೇ ಸೂಕ್ತ ಮಾರ್ಗದರ್ಶನ ನೀಡಬೇಕೆಂದು ಮನವಿ ಮಾಡಿದರು.

ತಾಂತ್ರಿಕ ಸಂಯೋಜಕ ಸಾಮ್ಯನಾಯ್ಕ, ರೈತ ಮುಖಂಡ ಪ್ರಕಾಶ್, ಖಾದರ್‌ಭಾಷ, ರವಿ, ತಿಮ್ಮಣ್ಣ, ಹನುಮಂತರಾಯ ಮುಂತಾದವರು ಉಪಸ್ಥಿತರಿದ್ದರು.

### ಸಾಣಿಕೆರೆ ಸರ್ಕಾರಿ ಶಾಲೆಯಲ್ಲಿ ಹಣ ದುರ್ಬಳಕೆ: ತನಿಖೆಗೆ ಒತ್ತಾಯ

» **ಚಳ್ಳಕೆರೆ**



ತಾಲ್ಲೂಕಿನ ಸಾಣಿಕೆರೆ ಗ್ರಾಮದ ಸರ್ಕಾರಿ ಹಿರಿಯಪ್ರಾಥಮಿಕ ಶಾಲೆಯಲ್ಲಿ ಬಿಸಿಯೂಟ ಹಾಗೂ ಶಾಲಾಭಿವೃದ್ದಿಗೆ ಮೀಸಲಿಟ್ಟ ಹಣವನ್ನು ಶಾಲೆಯ ಮುಖ್ಯಶಿಕ್ಷಕರು ದುರ್ಬಳಕೆ ಮಾಡಿಕೊಂಡ ಬಗ್ಗೆ ತನಿಖೆ ನಡೆಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಕರ್ನಾಟಕ ರಾಷ್ಟ್ರ ಪಕ್ಷ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಲಿಖಿತಮೂಲಕ ಮನವಿ ನೀಡಿದೆ. ಕೆಆರ್‌ಎಸ್ ತಾಲ್ಲೂಕು ಅಧ್ಯಕ್ಷ ಸಿ.ಬೋಜರಾಜ, ಜಿಲ್ಲಾ ಕಾರ್ಯದರ್ಶಿ ಬಾಲರಾಜು, ತಾಲ್ಲೂಕು ಪ್ರಧಾನಕಾರ್ಯದರ್ಶಿ ಮನೋಹರರೆಡ್ಡಿ, ನೀಡಿದ ಮನವಿಯಲ್ಲಿ ಇತ್ತೀಚೆಗೆಗಷ್ಟೇ ಸರ್ಕಾರ ಶಾಲಾಭಿವೃದ್ದಿಗೆ ಐದು ಲಕ್ಷ ಹಣವನ್ನು ನೀಡಿದೆ. ಆ ಪೈಕಿ 1.54 ಲಕ್ಷ ಹಣವನ್ನು ಈಗಾಗಲೇ ಬ್ಯಾಂಕ್‌ನಿಂದ ಪಡೆಯಲಾಗಿದೆ. ಈ ಬಗ್ಗೆ ಯಾವುದೇ ಲೆಕ್ಕಪತ್ರಗಳು ಲಭ್ಯವಿರುವುದಿಲ್ಲ, ಮುಖ್ಯ ಶಿಕ್ಷಕರು ಇಲಾಖೆಯ ನಿಯಮಗಳನ್ನು ಗಾಳಿಗೆ ತೂರಿ ಹಣ ದುರ್ಬಳಕೆ ಮಾಡಿಕೊಂಡಬಗ್ಗೆ ತುರ್ತುಕ್ರಮ ಕೈಗೊಳ್ಳಬೇಕೆಂದು ಮನವಿಯಲ್ಲಿ ಒತ್ತಾಯಿಸಿದೆ. ಮನವಿ ಸ್ವೀಕರಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಸರ್ಕಾರದಿಂದ ಬರುವ ಪ್ರತಿಯೊಂದು ಅನುದಾನದ ಬಳಕೆಗೆ ಅದರೇಯಾದ ನಿಯಮಗಳಿವೆ. ಶಾಲೆಯ ಮುಖ್ಯ ಶಿಕ್ಷಕರು ತಮಗೆ ಮನಬಂದತೆ ಹಣವನ್ನು ಡ್ರಾಮಾಡುವಾಗಲಿಲ್ಲ. ಶಾಲಾಭಿವೃದ್ದಿ ಸಮಿತಿ ಕಾರ್ಯನಿರ್ವಸುತ್ತಿದ್ದು, ಅವರ ಗಮನಕ್ಕೂ ಸಹ ತರಬೇಕಿದೆ. ಆದರೂ ತಾವು ನೀಡಿದ ಮನವಿಯನ್ನು ಸ್ವೀಕರಿಸಿ ಸಂಬಂಧಪಟ್ಟ ಮುಖ್ಯ ಶಿಕ್ಷಕರಿಗೆ ನೋಟಿಸ್ ನೀಡುವ ಭರವಸೆ ನೀಡಿದರು.

**ಪ್ರಮುಖ ಸುದ್ದಿ**

# ಮಗುವಿನ ಬೆಳವಣಿಗೆಯ ಎಲ್ಲಾ ಹಂತದಲ್ಲಿ ಆದ್ಯತೆ ನೀಡಿ: ಎಸ್ಪಿ

» **ದಾವಣಗೆರೆ**

ಮಗುವಿನ ದೈಹಿಕ ಆರೋಗ್ಯ, ಭಾವನಾತ್ಮಕ, ಭೌದ್ಧಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಎಲ್ಲಾ ಹಂತದಲ್ಲಿ ಪೋಷಕರು ಆದ್ಯತೆ ನೀಡಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದರು.




ಸರ್ಕಾರಿ ಪದವಿ ಪೂರ್ವ ಕಾಲೇಜು ಬಾನುವಳ್ಳಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಬಾಲ್ಯ ವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ, ಎಂ.ಟಿ.ಪಿ ಕಾಯ್ದೆ, ಪಿ.ಎನ್.ಡಿ.ಪಿ ಕಾಯ್ದೆ ಕುರಿತು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪೋಕ್ಸೋ ಕಾಯ್ದೆ 2012 ನ್ನು ಲೈಂಗಿಕ ಹಲ್ಲೆ, ಲೈಂಗಿಕ ಕಿರುಕುಳ ಮತ್ತು ಅಶ್ಲೀಲ ವರ್ತನೆಗಳಂತಹ ಅಪರಾಧಗಳಿಂದ ಮಕ್ಕಳನ್ನು ರಕ್ಷಿಸುವುದಕ್ಕಾಗಿ, ಮಕ್ಕಳ ಹಿತಾಸಕ್ತಿ ಮತ್ತು ಒಳಿತಿನ ರಕ್ಷಣೆಗಾಗಿ ಜಾರಿಗೆ ತರಲಾಗಿದೆ. ಈ ಕಾಯ್ದೆಯು 18 ವರ್ಷಕ್ಕಿಂತ ಕೆಳಗಿನ ವಯಸ್ಸಿನ ಯಾವುದೇ ಮಕ್ಕಳನ್ನು ಮಗು ಎಂದು ಪರಿಗಣಿಸಲಾಗುತ್ತದೆ ಎಂದು ತಿಳಿಸಿದರು.

16 ರಿಂದ 18 ವರ್ಷ ವಯಸ್ಸಿನ ಮಗುವಿನ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದರೆ ಕನಿಷ್ಠ 10 ವರ್ಷಗಳ ಸೆರೆವಾಸ, ಜೀವಾವಧಿ ಶಿಕ್ಷೆ ಮತ್ತು ದಂಡ ವಿಸ್ತರಿಸಬಹುದು. 16 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಗುವಿನ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದರೆ ಕನಿಷ್ಠ 20 ವರ್ಷಗಳ ಸೆರೆವಾಸ, ಜೀವನದ ಉಳಿದ ಅವಧಿಗೆ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲಾಗುತ್ತದೆ. ಮತ್ತು ಮಕ್ಕಳ ಮೇಲೆ ದೌರ್ಜನ್ಯ ಎಸಗಿದವರಿಗೆ ನ್ಯಾಯಾಲಯದಲ್ಲಿ ಜಾಮೀನು ದೊರೆಯುವುದಿಲ್ಲ. ದುಷ್ಕೃತ್ಯಕ್ಕೆ ನೇರವಾಗಿ ಹಾಗೂ ಪರೋಕ್ಷವಾಗಿ ಸಹಾಯ ಮಾಡಿದವರಿಗೂ ಈ ಕಾಯ್ದೆಯಡಿ ಶಿಕ್ಷೆ ಇದೆ ಎಂದು ಹೇಳಿದರು.

ಪೋಕ್ಸೋ ಕಾಯ್ದೆಯಡಿ ಮಕ್ಕಳ ರಕ್ಷಣೆಗಾಗಿ ಹಲವು ಸೆಕ್ಷನ್‌ಗಳನ್ನು ಸೇರಿಸಲಾಗಿದೆ. ಸೆಕ್ಷನ್ –4, ಸೆಕ್ಷನ್ –5, ಸೆಕ್ಷನ್ –6, ಸೆಕ್ಷನ್ –9, ಸೆಕ್ಷನ್ –15 ಮತ್ತು ಸೆಕ್ಷನ್ –15 ತಿದ್ದುಪಡಿ ಮತ್ತು ಸೆಕ್ಷನ್ –42ರ ತಿದ್ದುಪಡಿಗಳನ್ನು ಸೇರಿಸಲಾಗಿದೆ. ಮಕ್ಕಳ ಲೈಂಗಿಕ ದುರುಪಯೋಗವನ್ನು ಸೂಕ್ತ ರೀತಿಯಲ್ಲಿ ಪರಿಹರಿಸುವುದಕ್ಕಾಗಿ ತಿದ್ದುಪಡಿ ಮಾಡಲಾಗಿದೆ ಎಂದು ತಿಳಿಸಿದರು.

ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ತೆರೆದ ಮನೆ ಕಾರ್ಯಕ್ರಮದಡಿ ಶಾಲಾ ವಿದ್ಯಾರ್ಥಿಗಳಿಗೆ ಪೋಕ್ಸೋ ಕಾಯ್ದೆ ಕುರಿತು ಶಾಲಾ ಶಿಕ್ಷಣ ಇಲಾಖೆಯು ಪ್ರತಿ ಶಾಲೆಗಳಲ್ಲಿ ಬಿಡುವಿನ ವೇಳೆ, ಸಂದರ್ಭಾನುಸಾರ ಬೋಧನಾ ಅವಧಿ, ವಿವಿಧ ಸಾಂಸ್ಕೃತಿಕ ಚಟುವಟಿಕೆ, ರಾಷ್ಟ್ರೀಯ ಹಬ್ಬಗಳ ಸಂದರ್ಭ, ಪೋಷಕರ ಸಭೆ, ತಾಯಂದಿರ ಸಭೆ, ಕಾರ್ಯಕ್ರಮಗಳಲ್ಲಿ ಜಾಗೃತಿ ಮೂಡಿಸಲು ಈ ಮೂಲಕ ತಿಳಿಸಿದರು.

ಪ್ರೀತಿ, ಪ್ರೇಮವೆಂಬ ಆಕರ್ಷಣೆಗೆ ಒಳಗಾಗದೆ ಚನ್ನಾಗಿ ಓದಿ ಜೀವನದಲ್ಲಿ ಉತ್ತಮ ಸಾಧನೆ ಮಾಡಬೇಕು. ತಂದೆ–ತಾಯಿ ಕಂಡ ಕನಸುಗಳನ್ನು ನನಸು ಮಾಡಿ, ನಿಮ್ಮ ಭವಿಷ್ಯ ಉಜ್ವಲವಾಗಿ ರೂಪಿಸಿಕೊಳ್ಳಲು ಶ್ರಮಪಡಬೇಕು ಎಂದು ವಿದ್ಯಾರ್ಥಿಗಳಿಗೆ ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಶಿಕ್ಷಣ ಇಲಾಖೆಯೊಂದಿಗೆ ಗ್ರಾಮ ಪಂಚಾಯಿತಿ ಮಟ್ಟದ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಕನಿಷ್ಠ ಇಬ್ಬರು ಸದಸ್ಯರು, ಮತ್ತು ಬೀಟ್ ಪೊಲೀಸರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಗ್ರಾಮ ಲೆಕ್ಕಾಧಿಕಾರಿ, ಶಾಲೆ ಮುಖ್ಯೋಪಾಧ್ಯಾಯರು ಇವರನ್ನು ಒಳಗೊಂಡಂತೆ ಪೋಕ್ಸೋ ಕಾಯ್ದೆ ಮತ್ತು ಬಾಲ್ಯ ವಿವಾಹ ಕಾಯ್ದೆ ಬಗ್ಗೆ ಅರಿವು ಮೂಡಿಸಬೇಕಾಗಿದೆ ಎಂದರು.

ಹಲವಾರು ಎನ್‌ಜಿಒಗಳು ಅಭ್ಯಾಸ ಮಾಡಿದ ಪ್ರಕಾರ ಕೇವಲ 35 ಪ್ರತಿಶತ ಮಕ್ಕಳಿಗೆ ಹಾಗೂ 32 ಪ್ರತಿಶತ ಪೋಷಕರಿಗೆ ಪೋಕ್ಸೋ ಕಾಯ್ದೆ ಬಗ್ಗೆ ಅರಿವಿದೆ ಎಂದು ತಿಳಿದು ಬಂದಿರುತ್ತದೆ. 18 ವರ್ಷದ ಒಳಗಿನ ಬಾಲಕ ಬಾಲಕಿಯರು ಎಲ್ಲರೂ ಮಕ್ಕಳೇ ಇವರ ಮೇಲಾಗುತ್ತಿರುವ ಲೈಂಗಿಕ ದೌರ್ಜನ್ಯ, ಅತ್ಯಾಚಾರ ಇವುಗಳನ್ನು ತಡೆಗಟ್ಟುವುದು ಈ ಕಾಯ್ದೆ ಮುಖ್ಯ ಉದ್ದೇಶವಾಗಿದೆ. ಪರಿಚಿತರು ಮತ್ತು ಅಪರಿಚಿತರಿಂದ ಆಗುತ್ತಿರುವಂತಹ ದೌರ್ಜನ್ಯ, ಮಾನಸಿಕ ದೌರ್ಜನ್ಯ ಇವುಗಳನ್ನು ತಡೆಗಟ್ಟಿದರೆ ಮಕ್ಕಳ ಮಾನಸಿಕ, ಭೌತಿಕ ವಿಕಾಸ ಮತ್ತು ಶೈಕ್ಷಣಿಕವಾಗಿ ಮುಂದುವರೆಯುವುದಕ್ಕೆ ಅನುಕೂಲವಾಗುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಆರ್.ಎಲ್. ಕಾನೂನು ಕಾಲೇಜು ವಿಶ್ರಾಂತ ಪ್ರಾಂಶುಪಾಲರಾದ ಡಾ.ಎಂ ಸೋಮಶೇಖರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತ ಟಿ.ಎನ್, ಹರಿಹರ ತಾಲ್ಲೂಕು ಪಂಚಾಯತ್ ಕಾರ್ಯನಿವಾರ್ಹಕಾಧಿಕಾರಿ ರಾಮ ಕೃಷ್ಣ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪೂರ್ಣಿಮ.ಎಂ, ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಂತಪ್ಪ, ಆರಕ್ಷಕ ವೃತ್ತ ನಿರೀಕ್ಷಕರಾದ ಸುರೇಶ ಸಗರಿ, ಹಿರಿಯ ವೈದ್ಯಾಧಿಕಾರಿಯಾದ ಡಾ.ಪ್ರಶಾಂತ್, ಸರ್ಕಾರಿ ಪ್ರೌಢಶಾಲಾ ಮುಖ್ಯೋಪಾಧ್ಯಾಯರು, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಹಾಗೂ ವಿದ್ಯಾರ್ಥಿಗಳು ಇನ್ನಿತರರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ನ್ಯಾಯಾಂಗ ತರಬೇತಿ: ಹಿಂದುಳಿದ ವರ್ಗದ ಕಾನೂನು ಪದವೀಧರರಿಂದ ಅರ್ಜಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯಲ್ಲಿ ಹಿಂದುಳಿದ ವರ್ಗ-1, 2ಎ, 3ಬಿ, ವರ್ಗಕ್ಕೆ ಸೇರಿದ ನಿರುದ್ಯೋಗಿ ಕಾನೂನು ಪದವೀಧರರನ್ನು ನ್ಯಾಯಾಂಗ ತರಬೇತಿ ಯೋಜನೆಯಡಿ 2024-25ನೇ ಸಾಲಿನಲ್ಲಿ ಆಯ್ಕೆ ಮಾಡಲು ಖಾಲಿ ಇರುವ 10 ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಅರ್ಜಿ ಸಲ್ಲಿಸಲು ಇರುವ ನಿಬಂಧನೆಗಳು: ಅಭ್ಯರ್ಥಿಯು ವರ್ಗ-1, 2ಎ, 3ಬಿ, ವರ್ಗಕ್ಕೆ ಸೇರಿದ ಅಭ್ಯರ್ಥಿಗಳಾಗಿರಬೇಕು. ಆಯ್ಕೆ ಮಾಡಲಾಗುವ ಒಟ್ಟಾರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಲ್ಲಿ ಶೇ.33.33 ರಷ್ಟು ಮಹಿಳಾ ಅಭ್ಯರ್ಥಿಗಳಿಗೆ ಮೀಸಲಿಡಲಾಗುವುದು. ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕಕ್ಕೆ 2 ವರ್ಷದ ಒಳಗೆ ಅಭ್ಯರ್ಥಿಯು ಕಾನೂನು ಪದವಿಯಲ್ಲಿ ಉತ್ತೀರ್ಣರಾಗಿರಬೇಕು. ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದು ಸಲ್ಲಿಸಬೇಕು. ಸರ್ಕಾರಿ ಆದೇಶದಲ್ಲಿ ಹಿಂದುಳಿದ ವರ್ಗಕ್ಕೆ ಸೇರಿದ 2ಎ, 3ಎ, 3ಬಿ ವರ್ಗಗಳ (ಅಲ್ಪ ಸಂಖ್ಯಾತರ ಜಾತಿಗಳನ್ನು ಹೊರತುಪಡಿಸಿ) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ವಾರ್ಷಿಕ ಆದಾಯ ರೂ. 2,50,000/- ಹಾಗೂ ಪ್ರವರ್ಗ-1 ಅಭ್ಯರ್ಥಿಗಳು ರೂ.3,50,00 ಗಳ ಆದಾಯ ಮೀರಿಬಾರದು. ಈ ತರಬೇತಿಯು 4 ವರ್ಷಗಳಾಗಿದ್ದು, ತರಬೇತಿ ಅವಧಿಯಲ್ಲಿ ನಿಯಮಾನುಸಾರ ಭತ್ಯೆ ನೀಡಲಾಗುವುದು. ಆಯ್ಕೆಯನ್ನು ಜಿಲ್ಲಾ ಆಯ್ಕೆ ಸಮಿತಿ ಮೂಲಕ ನಡೆಸಲಾಗುವುದು. ಅರ್ಜಿ ಸಲ್ಲಿಸುವ ಅಭ್ಯರ್ಥಿಯ ವಯಸ್ಸು ನಿಗದಿಪಡಿಸಿದ ದಿನಾಂಕಕ್ಕೆ ಕನಿಷ್ಠ 38 ವರ್ಷ ಹಾಗೂ ಪ್ರವರ್ಗ-1ರ ಅಭ್ಯರ್ಥಿಗಳಿಗೆ ಗರಿಷ್ಠ 40 ವರ್ಷ ಮೀರಿರಬಾರದು. ಅಭ್ಯರ್ಥಿಯು ಬಾರ್ ಕೌನ್ಸಿಲ್‌ನಲ್ಲಿ ಹೆಸರು ನೊಂದಾಯಿಸಿರಬೇಕು. ನೊಂದಾಯಿಸಿಲ್ಲದ ಪಕ್ಷದಲ್ಲಿ ಆಯ್ಕೆಯಾದ ತಕ್ಷಣ ನೊಂದಾಯಿಸದ ಹೊರತು ಶಿಷ್ಯವೇತನ ಪಾವತಿಯಾಗುವುದಿಲ್ಲ. ಆಯ್ಕೆಯಾದ ಅಭ್ಯರ್ಥಿಗಳು ಸುಳ್ಳು ಜಾತಿ, ಆದಾಯ ಪ್ರಮಾಣ ಪತ್ರ ಅಥವಾ ಇತರೆ ಯಾವುದೇ ತಪ್ಪು ಮಾಹಿತಿಯನ್ನು ನೀಡಿ ಆಯ್ಕೆಯಾದ ಪಕ್ಷದಲ್ಲಿ ಅಂತವರನ್ನು ಶಿಕ್ಷೆಗೆ ಗುರಿಪಡಿಸುವುದಲ್ಲದೇ, ಶಿಷ್ಯ ವೇತನದ ಜೊತೆಗೆ ಶೇ.10ರ ಬಡ್ಡಿಯನ್ನು ಭೂ ಕಂದಾಯ ಬಾಕಿ ರೂಪದಲ್ಲಿ ವಸೂಲಿ ಮಾಡಲಾಗುವುದು. ಅಲ್ಲದೇ ತರಬೇತಿಯನ್ನು ಮಧ್ಯದಲ್ಲಿ ಬಿಟ್ಟಲ್ಲಿ ಇಲಾಖೆಯಿಂದ ಪಡೆದ ಶಿಷ್ಯವೇತನವನ್ನು ಹಿಂತಿರುಗಿಸಬೇಕಾಗುವುದು. ಅಭ್ಯರ್ಥಿಗಳು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್, ಸರ್ಕಾರಿ ವಕೀಲರು 20 ವರ್ಷಗಳಿಗೆ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರುವ ವಕೀಲರ ಬಳಿ ತರಬೇತಿಗೆ ನಿಯೋಜಿಸಲಾಗುವುದು. ಅಪೂರ್ಣ ಅವಧಿ ಮೀರಿದ ತಪ್ಪು ಮಾಹಿತಿ ಅಥವಾ ನಿಗದಿತ ದಿನಾಂಕದ ನಂತರ ಸ್ವೀಕರಿಸಲಾದ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೆ ತಿರಸ್ಕರಿಸಲಾಗುವುದು. ಅರ್ಜಿದಾರರು ಬೇರೆ ಇಲಾಖೆಯಿಂದ ತರಬೇತಿ ಭತ್ಯೆ ಪಡೆಯುತ್ತಿದ್ದಲ್ಲಿ ಅರ್ಹರಿರುವುದಿಲ್ಲ. ಅರ್ಜಿದಾರರು ಸ್ಥಳೀಯ ಸಂಸ್ಥೆ ಹಾಗೂ ಸೊಸೈಟಿ, ಗ್ರಾಮ ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಹಾಗೂ ಯಾವುದೇ ಸದಸ್ಯರಾಗಿದ್ದಲ್ಲಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಹಾಗೂ ನಿಗದಿತ ಅರ್ಜಿ ನಮೂನೆಗಳನ್ನು ಪಡೆಯಲು ನಗರದ ಸ್ಟೇಡಿಯಂ ರಸ್ತೆಯ ಡಿ.ದೇವರಜ ಅರಸು ಭವನದಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ವಿದ್ಯಾರ್ಥಿನಿಲಯ ಪ್ರವೇಶಗಳಿಗೆ ಅರ್ಜಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ 2024-25ನೇ ಸಾಲಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 20 ಕೊನೆಯ ದಿನಾಂಕವಾಗಿದೆ. ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾತಿ, ಪ.ವರ್ಗ, ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳು ಜಾಲತಾಣದ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಪ್ರವರ್ಗ-1, ಎಸ್.ಸಿ. ಮತ್ತು ಎಸ್.ಟಿ ವರ್ಗದ ವಾರ್ಷಿಕ ಆದಾಯ 2.50 ಲಕ್ಷ, ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳ ವಾರ್ಷಿಕ ಆದಾಯ ರೂ. 1 ಲಕ್ಷ ಮೀರಿರಬಾರದು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನ್ನು ಪರಿಶೀಲಿಸಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ದೋಷಗಳು ಉಂಟಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ, ತಾಲ್ಲೂಕು ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಿ.

**ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ತರಬೇತಿ ಕಾರ್ಯಕ್ರಮದಲ್ಲಿ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್**

# ಗ್ರಾಮೀಣ ಪ್ರದೇಶದಲ್ಲಿ ಕುಡಿವ ನೀರು ಜಾಗೃತಿ ಮೂಡಿಸಿ

» **ಚಿತ್ರದುರ್ಗ**

ಮಳೆಗಾಲ ಆರಂಭವಾಗಿದ್ದು, ಕಲುಷಿತ ನೀರು ಸೇವನೆಯಿಂದ ಆರೋಗ್ಯದ ಮೇಲೆ ಗಂಭೀರ ಸ್ವರೂಪದ ಪರಿಣಾಮಗಳು ಬೀರುವ ಸಾಧ್ಯತೆಗಳಿರುವುದರಿಂದ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಮುಂಜಾಗ್ರತಾ ಕ್ರಮವಾಗಿ ಸಾರ್ವಜನಿಕರ ಸಹಭಾಗಿತ್ವದಲ್ಲಿ ಜಾಗೃತಿ ಮೂಡಿಸುವ ಕೆಲಸ ನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಪಂಚಾಯತ್ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ವತಿಯಿಂದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಫೀಲ್ಡ್ ಟೆಸ್ಟ್ ಕಿಟ್ ಮತ್ತು ಹೆಚ್ ಟು ಎಸ್ ವಯಲ್ಸ್ ಉಪಯೋಗಿಸಿ ನೀರು ಪರೀಕ್ಷೆ ಕೈಗೊಳ್ಳಲು ಏರ್ಪಡಿಸಿದ ಜಿಲ್ಲಾ ಮಟ್ಟದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶದ ಪ್ರತಿ ಗ್ರಾಮದಲ್ಲಿ ಕುಡಿಯುವ ನೀರು ಬಗ್ಗೆ ಜಾಗೃತಿ ಮೂಡಿಸುವ ಭಿತ್ತಿ ಪತ್ರ ಮತ್ತು ಕ್ಷೇತ್ರ



ಪರೀಕ್ಷಾ ಕಿಟ್ ಉಪಯೋಗಿಸಿ ನೀರು ಪರೀಕ್ಷೆ ಮಾಡುವ ಕೈಪಿಡಿಯನ್ನು ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ಬಿಡುಗಡೆಗೊಳಿಸಿದರು.

ಜಿ.ಪಂ ಯೋಜನಾ ನಿರ್ದೇಶಕ ಡಾ.ಎಸ್.ರಂಗಸ್ವಾಮಿ ಮಾತನಾಡಿ, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಯ ಸದಸ್ಯರಿಗೆ ಗ್ರಾಮ ಪಂಚಾಯಿತಿ ಹಂತದಲ್ಲಿ ನೀರು ಪರೀಕ್ಷೆ ಕಿಟ್‌ಗಳ ಮೂಲಕ ಗ್ರಾಮದಲ್ಲಿ ಇರುವ ಕುಡಿಯುವ ನೀರು ಜಲಮೂಲಗಳ ನೀರು ಸಂಗ್ರಹಿಸಿ, ಪರೀಕ್ಷೆ ಮಾಡಿಸಿ, ನೀರು ಕುಡಿಯಲು ಯೋಗ್ಯವಾಗಿ ಇಲ್ಲದೇ ಇದ್ದರೆ ನಂತರ ತಾಲ್ಲೂಕು ಮಟ್ಟದ ನೀರು ಪರೀಕ್ಷಾ ಪ್ರಯೋಗಾಲಕ್ಕೆ ತಂದು ನೀರು ಪರೀಕ್ಷೆ ಮಾಡಿಸಿ ನಂತರ ಕ್ರಮ ಕೈಗೊಳ್ಳಲು ತಿಳಿಸಿದರು.

ನೀರು ಮತ್ತು ನೈರ್ಮಲ್ಯ ಸಮಿತಿಗಳ ಪುನರ್ ರಚನೆ ಮಾಡಿ ಕಡ್ಡಾಯವಾಗಿ ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ಮಾಡಿ ನಡಾವಳಿ ಮಾಡಬೇಕು. ಗ್ರಾಮದಲ್ಲಿ ನೀರು ಮತ್ತು ನೈರ್ಮಲ್ಯಕ್ಕೆ ಸಂಬಂಧಪಟ್ಟಂತೆ ಸಮಸ್ಯೆಗಳು ಇದ್ದಲ್ಲಿ ಕೂಡಲೇ ಗ್ರಾಮ ಪಂಚಾಯಿತಿ ಅಧ್ಯಕ್ಷರ ಗಮನಕ್ಕೆ ತಂದು ಪರಿಹರಿಸಬೇಕು ಎಂದು ತಿಳಿಸಿದರು.

ಜಿ.ಪಂ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ ಮಾತನಾಡಿ, ಕುಡಿಯುವ ನೀರನ್ನು ಕ್ಷೇತ್ರ ಪರೀಕ್ಷೆಯಡಿ ಕಿಟ್ ಬಳಸಿ, ಪರೀಕ್ಷಿಸಿ, ಕಲುಷಿತ ನೀರು ಕಂಡು ಬಂದರೆ ಕೂಡಲೇ ಅಂತಹ ಜಲ ಮೂಲಗಳಿಂದ ನೀರು ಪೂರೈಕೆ ನಿಲ್ಲಿಸಬೇಕು ಮತ್ತು ಗ್ರಾಮದಲ್ಲಿ ಪೈಪುಗಳು ಒಡೆದು ಹೋಗಿದ್ದರೆ ದುರಸ್ಥಿ ಮಾಡಿಸಿ ನೀರು ಸರಬರಾಜು ಮಾಡಬೇಕು ಎಂದು ತಿಳಿಸಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸನಗೌಡ ಪಾಟೀಲ್ ಮಾತನಾಡಿ, ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ಕ್ಷೇತ್ರ ಪರೀಕ್ಷಾ ಕಿಟ್ ಬಳಸಿಕೊಳ್ಳಲು ತಿಳಿಸಿದರು. ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳ ಪುನರ್ ರಚನೆ ಮಾಡಿ ಪ್ರತಿ ಗ್ರಾಮದಲ್ಲಿ ನೀರು ಮತ್ತು ನೈರ್ಮಲ್ಯ ಸಮಿತಿಗಳು ಸಕ್ರಿಯವಾಗಿರಲು ತಿಳಿಸಿದರು.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಹಾಗೂ ತಾಲ್ಲೂಕು ನೀರು ಪರೀಕ್ಷೆ ಪ್ರಯೋಗಾಲಯದ ಸಿಬ್ಬಂದಿಗಳು, ನೀರು ಪರೀಕ್ಷೆ ಮಾಡಿಸಿ ಮಾಹಿತಿ ನೀಡಿದರು.

ಈ ಸಂದರ್ಭದಲಿ ಜಿಲ್ಲಾ ಯೋಜನಾ ವ್ಯವಸ್ಥಾಪಕರಾದ ಶ್ರೀ. ಮಂಜುನಾಥ್ ಎಸ್.ನಾಡರ್, ಜಿಲ್ಲಾ ಎಂಐಎಸ್ ಸಮಾಲೋಚಕ ಸ್ನೇಹನ್, ಜಿಲ್ಲಾ ಐಇಸಿ ಸಮಾಲೋಚಕ ಬಿ.ಸಿ.ನಾಗರಾಜು, ಲ್ಯಾಬ್ ಸಿಬ್ಬಂದಿಗಳು, ಐಎಸ್‌ಆರ್‌ಎ ಸಿಬ್ಬಂದಿಗಳು ಇದ್ದರು.

# ಹಾಸ್ಟೆಲ್ ಪ್ರವೇಶ ಆಯ್ಕೆ ಪ್ರಕ್ರಿಯೆಯಲ್ಲಿ ವಿಳಂಬ ಖಂಡಿಸಿ ಎಬಿವಿಪಿ ಪ್ರತಿಭಟನೆ



» **ಚಿತ್ರದುರ್ಗ**

ವಿದ್ಯಾರ್ಥಿಗಳ ಹಾಸ್ಟೆಲ್ ಪ್ರವೇಶಾತಿ ಆಯ್ಕೆ ಪ್ರಕ್ರಿಯೆಯಲ್ಲಿ ವಿಳಂಬ ಹಾಗೂ ವಿದ್ಯಾರ್ಥಿ ವೇತನವನ್ನು ನೀಡದ ರಾಜ್ಯ ಸರಕಾರದ ವಿರುದ್ಧ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಬುಧವಾರ ನಗರದಲ್ಲಿ ಪ್ರತಿಭಟನೆಯನ್ನು ನಡೆಸಿತು.

ಗ್ರಾಮೀಣ ಭಾಗದಿಂದ ಬಡ ಮತ್ತು ಪ್ರತಿಭಾವಂತ ಸಾವಿರಾರು ವಿದ್ಯಾರ್ಥಿಗಳು ಶಿಕ್ಷಣವನ್ನು ಪಡೆಯಬೇಕೆಂಬ ಆಶಯವನ್ನ ಇಟ್ಟುಕೊಂಡು ನಗರ ಪ್ರದೇಶಗಳಿಗೆ ಬರುತ್ತಾರೆ, ಆ ವಿದ್ಯಾರ್ಥಿಗಳಿಗೆ ಸರ್ಕಾರಗಳು ಮೂಲಭೂತ ಸೌಲಭ್ಯಗಳನ್ನ ಒದಗಿಸುವುದು ಆದ್ಯ ಕರ್ತವ್ಯವಾಗಿದೆ, ಆದರೆ ಕರ್ನಾಟಕ ರಾಜ್ಯದಲ್ಲಿ ಕಾಲೇಜು ಮತ್ತು ಪ್ರೌಢ ಶಾಲೆಗಳು ಪ್ರಾರಂಭವಾದ ಮೂರು ತಿಂಗಳಗಳ ವರೆಗೆ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಪ್ರವೇಶಾತಿ ಸಿಗುತ್ತಿಲ್ಲ, ಜೂನ್ ತಿಂಗಳಲ್ಲಿ ಶಾಲೆ- ಕಾಲೇಜುಗಳು ಪ್ರಾರಂಭವಾದರೂ ಸಹಿತ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಪ್ರವೇಶಾತಿ ಸಿಗುವುದರಲ್ಲಿ ಸಪ್ಟಂಬರ್‌ವರೆಗೂ ತಲುಪುವ ಹಂತವನ್ನು ಸರ್ಕಾರ ಮತ್ತು ಅಧಿಕಾರಿಗಳು ಮಾಡುತ್ತಿರುವುದರಿಂದ ಸಾವಿರಾರು ವಿದ್ಯಾರ್ಥಿಗಳು ಮೂರು ತಿಂಗಳುಗಳ ಕಾಲ ಎಲ್ಲಿ ಉಳಿದುಕೊಂಡು ಶಿಕ್ಷಣವನ್ನ ಪಡೆಯಬೇಕು ಎಂಬುವ ಸಾಮಾನ್ಯಜ್ಞಾನವು ಸರ್ಕಾರಗಳಿಗೆ ಇಲ್ಲದಂತಾಗಿದೆ, ರಾಜ್ಯ ಸರ್ಕಾರಕೂಡಲೇ ಈ ವರ್ಷದ ಹಾಸ್ಟೆಲ್‌ಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ತಕ್ಷಣವೇ ಪೂರ್ಣಗೊಳಿಸಿ, ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಪ್ರವೇಶಾ ತಿಕಲ್ಪಿಸಬೇಕೆಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ರಾಜ್ಯ ಸರ್ಕಾರವನ್ನು ಆಗ್ರಹಿಸುತ್ತದೆ.

ಹಾಸ್ಟೆಲ್‌ಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಲ್ಲಿ 40% ವಿದ್ಯಾರ್ಥಿಗಳಿಗೆ ಮಾತ್ರ ವಸತಿ ನಿಲಯಗಳನ್ನು ಕಲ್ಪಿಸಿಕೊಡುವ ವ್ಯವಸ್ಥೆ ಈಗ ನಮ್ಮ ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿ ಲಭ್ಯವಿದೆ, ಆದರೆ ಇನ್ನುಳಿದ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಈ ವ್ಯವಸ್ಥೆಯಿಂದ ವಂಚಿತರಾಗಿ ತಮ್ಮ ಉನ್ನತ ಶಿಕ್ಷಣವನ್ನ ಪಡೆಯಲು ಕಷ್ಟಕರವಾಗುತ್ತಿದೆ, ಸರ್ಕಾರ ಕೂಡಲೇ ಹಾಸ್ಟೆಲಗಳ ಸಂಖ್ಯೆಯನ್ನು ಹೆಚ್ಚಳ ಮಾಡುವ ನಿಟ್ಟಿನಲ್ಲಿ ವಿಶೇಷ ಅನುದಾನವನ್ನ ನೀಡಿ ಹಾಸ್ಟೆಲ್‌ಗಳ ಸಂಖ್ಯೆಗಳನ್ನ ಹೆಚ್ಚಳ ಮಾಡಬೇಕು ಹಾಗೂ ಈಗಿರುವ ಹಾಸ್ಟೆಲ್‌ಗಳಿಗೆ ಮೂಲಭೂತ ಸೌಲಭ್ಯವನ್ನು ಒದಗಿಸುವಂತೆ ರಾಜ್ಯ ಸರ್ಕಾರಕ್ಕೆ ಎಬಿವಿಪಿ ಒತ್ತಾಯಿಸುತ್ತದೆ.

ಲಕ್ಷಾಂತರ ಬಡ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನವನ್ನು ನಂಬಿ ಶಿಕ್ಷಣವನ್ನ ಪಡೆಯುತ್ತಿದ್ದಾರೆ, ತಮ್ಮ ಶಿಕ್ಷಣಕ್ಕೆ ಸರ್ಕಾರಗಳು ನೀಡುವ ವಿದ್ಯಾರ್ಥಿವೇತನ ಸಹಕಾರಿಯಾಗಲಿದೆ ಎಂಬ ಭಾವನೆಯೊಂದಿಗೆಅರ್ಜಿ ಸಲ್ಲಿಸಿದ ಲಕ್ಷಾಂತರ ವಿದ್ಯಾರ್ಥಿಗಳಿಗೆ ಕಳೆದ ವರ್ಷದ ವಿದ್ಯಾರ್ಥಿವೇತನಜಮೆಯಾಗದೆ ಬಹಳಷ್ಟು ತೊಂದರೆಯನ್ನು ಅನುಭವಿಸುತ್ತಿದ್ದಾರೆ, ಕಾರ್ಮಿಕರ ಮಕ್ಕಳ ವಿದ್ಯಾರ್ಥಿ ವೇತನವನ್ನು ಕಡಿತಗೊಳಿಸಿರುವುದು, ವಿದ್ಯಾಸಿರಿ ವಿದ್ಯಾರ್ಥಿ ವೇತನ ಸರಿಯಾಗಿ ಜಮೆಯಾಗದೇ ಇರುವುದು, ರೈತ ವಿದ್ಯಾನಿಧಿಯನ್ನು ರದ್ದುಗೊಳಿಸಿರುವುದು, ಹಾಗೂ ಇನ್ನುಳಿದ ವಿದ್ಯಾರ್ಥಿ ವೇತನವು ಸರಿಯಾಗಿ ವಿದ್ಯಾರ್ಥಿಗಳಿಗೆ ಜಮೆ ಮಾಡದೆ ವಿದ್ಯಾರ್ಥಿ ವಿರೋಧಿ ನೀತಿಯನ್ನು ಅನುಸರಿಸುತ್ತಿರುವ ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಸಂಬಂಧಿಸಿದ ಸಚಿವರು ತಕ್ಷಣವೇ ವಿದ್ಯಾರ್ಥಿ ವೇತನವನ್ನು ವಿದ್ಯಾರ್ಥಿಗಳ ಖಾತೆಗೆ ಜಮೆ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕೆಂದು ವಿದ್ಯಾರ್ಥಿ ಪರಿಷತ್‌ಆಗ್ರಹಿಸುತ್ತದೆ.

ಹಾಸ್ಟೆಲ್‌ಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನುಕೂಡಲೇ ಪೂರ್ಣಗೊಳಿಸಿ ಹಾಸ್ಟೆಲ್‌ಗಳಿಗೆ ಪ್ರವೇಶಾತಿ ನೀಡಬೇಕು.ರಾಜ್ಯದಲ್ಲಿ ಸಮಾಜಕಲ್ಯಾಣ ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ಇಲಾಖೆಗಳ ಹಾಸ್ಟೆಲ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡಬೇಕು. ಬಾಕಿ ಉಳಿದಿರುವ ಹಿಂದಿನ ವರ್ಷದ ವಿದ್ಯಾರ್ಥಿ ವೇತನವನ್ನುತಕ್ಷಣವೇ ವಿದ್ಯಾರ್ಥಿಗಳ ಖಾತೆಗೆ ಜಮೆ ಮಾಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಲಾಯಿತು, ಈ ಸಂದರ್ಭದಲ್ಲಿ ನಗರ ಕಾರ್ಯದರ್ಶಿ ಗೋಪಿ, ಸಾಮಾಜಿಕ ಜಾಲತಾಣ ಚಿತ್ರಸ್ವಾಮಿ, ಸುದೀಪ್ ಹಾಸ್ಟೆಲ್ ಪ್ರಮುಖ್, ಸಿದ್ದೇಶ್, ಕಾರ್ಯಕರ್ತರು ಮಧು, ಸಂಜು, ತಿಪ್ಪೇಶ, ದರ್ಶನ್, ಮನೋಜ್, ಜೀವನ್ ಹಾಗೂ ಇನ್ನು ಇತರರು ಭಾಗವಹಿಸಿದ್ದರು.

## ಹಿರೇಹಳ್ಳಿ ಗ್ರಾಮ ಪಂಚಾಯಿತಿಗೆ ಕರವಸೂಲಿಗಾರ ಹಾಗೂ ಸಿಬ್ಬಂದಿ ನೇಮಕಕ್ಕೆ ಆಗ್ರಹ

» **ಚಳ್ಳಕೆರೆ**

ಗ್ರಾಮೀಣ ಭಾಗಗಳ ಜನರಿಗೆ ಮೂಲಭೂತ ಸೌಕರ್ಯ ಒದಗಿಸುವ ಜೊತೆಗೆ ಸ್ವಚ್ಚತೆಯನ್ನು ಕಾಪಾಡುವ ಗುರುತರ ಜವಾಬ್ದಾರಿ ಪಂಚಾಯಿತಿ ಆಡಳಿತದ ಮೇಲಿದೆ. ಇದರ ಜೊತೆಯಲ್ಲೇ ಪಂಚಾಯಿತಿ ಆಡಳಿತವನ್ನು ಸುಲಲಿತವಾಗಿ ನಡೆಸಲು ಸಾಕಷ್ಟು ಸಿಬ್ಬಂದಿಯನ್ನು ಸಹ ನೇಮಿಸಿಕೊಳ್ಳಬೇಕಿದೆ. ಹಿರೇಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕರವಸೂಲಿಗಾರ ಹಾಗೂ ಸ್ವಚ್ಚತಾ ಅನುವುಗಾರರಿಲ್ಲದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದು ಅವರನ್ನು ನೇಮಕ ಮಾಡುವಂತೆ ಗ್ರಾಮ ಪಂಚಾಯಿತಿ ಸದಸ್ಯ ಎಸ್.ರಾಜಣ್ಣ ಮನವಿ ಮಾಡಿದ್ದಾರೆ. ಅವರು, ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿ, ತಳಕು ಹೋಬಳಿ ಮಟ್ಟದಲ್ಲಿ ಹಿರೇಹಳ್ಳಿ ಗ್ರಾಮ ಪಂಚಾಯಿತಿ ಎಗ್ರೇಡ್ ವ್ಯಾಪ್ತಿಯಲ್ಲಿದ್ದು, ಆರಕ್ಕೂ ಹೆಚ್ಚು ಗ್ರಾಮಗಳ ಸೇರ್ಪಡೆಯಾಗಿದೆ, 10 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಈ ಪಂಚಾಯಿತಿಯಲ್ಲಿದೆ. ಆದರೆ, ಸ್ವಚ್ಚತಾ ಅನುವುಗಾರರು, ನೀರಗಂಟಿಗಳು, ಕರವಸೂಲಿಗಾರರ ನೇಮಕವಾಗದೆ ಸಾರ್ವಜನಿಕರು ತೊಂದರೆಗೆ ಒಳಗಾಗಿದ್ದಾರೆಂದರು. ಗ್ರಾಮ ಪಂಚಾಯಿತಿಗೆ ಅವಶ್ಯವಿರುವ ಕರವಸೂಲಿಗಾರ, ಹೆಚ್ಚುವರಿ ಇಬ್ಬರು ಸ್ವಚ್ಚತಾ ಅನುವುಗಾರರು, ಇಬ್ಬರು ನೀರುಗಂಟಿಗಳನ್ನು ಕೂಡಲೇ ನೇಮಕ ಮಾಡಬೇಕೆಂದು ಅವರು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗೆ ಮನವಿ ನೀಡಿ ಒತ್ತಾಯಿಸಿದ್ದಾರೆ.

## ಬಿಎಂ ಸರ್ಕಾರಿ ಪ್ರೌಢಶಾಲೆ ಮೈದಾನದಲ್ಲಿ ಇಂದು ಜನಸ್ಪಂದನಾ : ಶಾಸಕ ಟಿ.ರಘುಮೂರ್ತಿ ಚಾಲನೆ.

» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸಾರ್ವಜನಿಕ ಸಮಸ್ಯೆ ಹಾಗೂ



ಅವುಗಳ ನಿವಾರಣೆಗೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಕೈಗೊಂಡ ಕ್ರಮದ ಬಗ್ಗೆ ಚರ್ಚಿಸಲು ಜುಲೈ-4ರ ಗುರುವಾರ ಬೆಳಗ್ಗೆ 10.30ಕ್ಕೆ ಜನಸ್ಪಂದನಾ ಸಭೆಯನ್ನು ಏರ್ಪಡಿಸಲಾಗಿದೆ ಎಂದು ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ ನಗರದ ಬಿಸಿನೀರು ಮುದ್ದಪ್ಪ ಬಯಲುರಂಗಮಂದಿರದಲ್ಲಿ ಸಭೆ ನಡೆಯಲಿದ್ದು ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಸಭೆಯಲ್ಲಿ ಹಾಜರಾಗಿ ಜನರ ಸಮಸ್ಯೆಗಳಿಗೆ ಸ್ಪಂದಿಸಲಿದ್ದಾರೆ. ಸಭೆಯ ಅಧ್ಯಕ್ಷತೆಯನ್ನು ಶಾಸಕರ ವಹಿಸಲಿದ್ದು, ಸಾರ್ವಜನಿಕರು ಜನಸ್ಪಂದನಾ ಸಭೆಗೆ ಹಾಜರಾಗಿ ತಮ್ಮ ಸಮಸ್ಯೆಗಳ ಬಗ್ಗೆ ನಿವೇದಿಸಿಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

**ಪ್ರಮುಖ ಸುದ್ದಿ**

# ಪರಿಸರ ರಕ್ಷಣೆ ನಿತ್ಯದ ಕಾಯಕವಾಗಬೇಕು: ಉಮೇಶ

» **ಚಿತ್ರದುರ್ಗ**

ನಿಸರ್ಗ ಸಹ ತಾಯಿ ಸ್ವರೂಪಿ. ಹೀಗಾಗಿ ಪರಿಸರ ರಕ್ಷಣೆ ಆದ್ಯ ಕರ್ತವ್ಯ, ನಿತ್ಯದ ಕಾಯಕವಾಗಬೇಕು ಎಂದು ಬಿಜೆಪಿ ರಾಜ್ಯ ಎಸ್.ಸಿ. ಮೋರ್ಚಾ ಕಾರ್ಯದರ್ಶಿ ಉಮೇಶ ಕಾರಜೋಳ ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿಯವರ ಆಕಾಶವಾಣಿಯಲ್ಲಿ ಪ್ರಸಾರವಾಗುವ ಮನ್ ಕೀ ಬಾತ್ ಕಾರ್ಯಕ್ರಮದಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಪರಿಸರ ಕಾಳಜಿ ಕುರಿತು ಹೇಳಿದ ಅಮ್ಮನ ಹೆಸರಿನಲ್ಲಿ ಗಿಡ ನೆಡುವ ಅಭಿಯಾನಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಚಿತ್ರದುರ್ಗ ನಗರದ ವಾರ್ಡ್ ನಂ. 31 ರ ವ್ಯಾಪ್ತಿಯಲ್ಲಿ ಬರುವ ಬ್ಯಾಂಕ್ ಕಾಲೋನಿ ಕ್ಷೇಮಾಬಿವೃದ್ಧಿ ಸಂಘದವತಿಯಿಂದ ಸಸಿಗಳನ್ನು ನೆಡುವ ಅಭಿಯಾನಕ್ಕೆ ಸಸಿ ನೆಡುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಹೆತ್ತ ತಾಯಿ ಋಣ



ತೀರಿಸಲು ಈ ಜನ್ಮದಲ್ಲಿ ಸಾಧ್ಯವಿಲ್ಲ, ಹೆತ್ತ ತಾಯಿಯ ಹೆಸರಿನಲ್ಲಿ ಗಿಡ ನೆಡುವ ಮೂಲಕ ನಮಗೆ ಉಸಿರು ನೀಡಿರುವ ಪರಿಸರ ರಕ್ಷಿಸುವ ಪವಿತ್ರ ಕಾಯಕ ಕೈಗೊಳ್ಳುವಂತೆ ಪ್ರಧಾನಿ ಮೋದಿಜಿ ಕರೆ ನೀಡಿದ್ದಾರೆ. ನಿಸರ್ಗ ಸಹ ತಾಯಿ ಸ್ವರೂಪಿ. ಹೀಗಾಗಿ ಪರಿಸರ ರಕ್ಷಣೆ ಆದ್ಯ ಕರ್ತವ್ಯ, ನಿತ್ಯದ ಕಾಯಕವಾಗಬೇಕು ಎಂದರು. ಕೇವಲ ಸಸಿ ನೆಟ್ಟರೆ ಸಾಲದು, ಅವುಗಳನ್ನು ಪೋಷಿಸುವುದು ಅಷ್ಟೇ ಮುಖ್ಯ, ಮಾನವನ ಪರಿಸರ ವಿರೋಧಿ ಚಟುವಟಿಕೆಗಳಿಂದ ಪರಿಸರ ಹಾನಿಯಾಗುತ್ತಿದೆ, ಇದರಿಂದ ನಿರಫರಾಧಿ ಉಳಿದ ಜೀವಿಗಳಿಗೂ ತೊಂದರೆಯಾಗುತ್ತಿದೆ. ಸಸಿ ನೆಡುವುದು ನಮ್ಮದೈನಂದಿನಜೀವನದಭಾಗವಾಗಬೇಕು ಗಿಡಗಳಿಗೆ ನೀರುಣಿಸುವುದು, ಎಲೆಗಳಿಗೆ ರೋಗ ತಾಕಿದೆಯೇ ಎಂದು ಪರೀಕ್ಷಿಸುವುದು, ಇತರರಿಗೂ ಸಸಿ ನೆಡಿ ಎಂದು ಹೇಳುವುದು ಸಹ ಪರಿಸರ ರಕ್ಷಣೆ ಭಾಗವೇ ಎಂದರು. ಈ ಸಂದರ್ಭದಲ್ಲಿ ಡಾ.ರವಿಪ್ರಕಾಶ್ ರೆಡ್ಡಿ, ರಮೇಶ್, ಪಾಂಡುರಂಗ ರೆಡ್ಡಿ, ಬಿ. ಎಂ ಪಾಲಯ್ಯ, ತಿಮ್ಮೇಶ. ಆದರ್ಶ. ತಿರುಮಲಕ್ಷ್ಮಿ, ಅನಿತಾ, ಸುಧಾ, ಸುಮಿತ್ರಮ್ಮ ಹಾಗೂ ಕಾಲೋನಿಯ ನಿವಾಸಿಗಳು ಪಾಲ್ಗೊಂಡಿದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T